ಬೆಂಗಳೂರು,
ಕೋಲಾರ,
ಹಾಸನ,
ಚಿತ್ರದುರ್ಗ,
ದಾವಣಗೆರೆ,
ವಿಜಯನಗರ,
ಬಳ್ಳಾರಿ,
ರಾಯಚೂರು,
ವಿಜಯಪುರ,
ಕಲಬುರ್ಗಿ

ದಶಕದ ನಡಿಗೆ... RNI No: KARKAN/2014/54928 ನೊಂದವರ ಧ್ವನಿ

# ಸಹಾಯ ವಾಣಿ

www.sahayavani.com SAHAYAVANI Postal Registration N.o KA/BGW--1862/2024-26 KANNADA DAILY PAPER ಕನ್ನಡ ದಿನಪತ್ರಿಕೆ

ಸಂಪುಟ: 11 Vol:11
ಸಂಚಿಕೆ: 143 Issue:143
ದಿನಾಂಕ:09-07-2024 Date:09-07-2024
ಮಂಗಳವಾರ Thuesday
ಪುಟ:4 Page:4
ರೂ.: 3-00 Rs.3-00

ಸಂಪಾದಕರು: ಎಸ್.ಕೆ.ಒಡೆಯರ್ ಉಪಸಂಪಾದಕರು: ಸುಚಿತ್ರ ಎಸ್. ಒಡೆಯರ್ ಎಂಬಿಎ ಗೌರವ ಸಂಪಾದಕರು: ಗುರುರಾಜು ಎಂ., ಫೋ: 080-31212322 ಮೊ.: 9902543494 E-mail:sahayavany@gmail.com

# ಜಿಲ್ಲಾಧಿಕಾರಿ ಮಹಾರಾಜನಲ್ಲ

## ಜನಸಾಮಾನ್ಯರ ಕೆಲಸ ನಿರ್ಲಕ್ಷಿಸಿದರೆ ಸಹಿಸಲ್ಲ, ಅಧಿಕಾರಿಗಳಿಗೆ ಸಿಎಂ ಖಡಕ್ ಎಚ್ಚರಿಕೆ

ಬೆಂಗಳೂರು, ಜು. 8-

ಜಿಲ್ಲಾಧಿಕಾರಿಗಳು ಎಂದರೆ ಮಹಾರಾಜರಲ್ಲ, ನಾವು ಮಹಾರಾಜರು ಎನ್ನುವ ಮನೋಭಾವ ಬಿಟ್ಟು ಬಿಡಿ. ಈ ರೀತಿಯ ಮನೋಭಾವ ಇದ್ದರೆ ಜನಸೇವೆ ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಚಾಟಿ ಬೀಸಿದರು.ಜನಸಾಮಾನ್ಯರ ಕೆಲಸದಲ್ಲಿ ಉದಾಸೀನ, ನಿರ್ಲಕ್ಷ್ಯವನ್ನು ನಾನು ಸಹಿಸಲ್ಲ, ಸರಿಯಾಗಿ ಕೆಲಸ ಮಾಡದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸುತ್ತೇನೆ ಎಂದು ಅವರು ಖಡಕ್ ಎಚ್ಚರಿಕೆ ನೀಡಿದರು.ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ನಡೆದ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಸಭೆಯಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕೆಲಸ ಮಾಡದ ಅಧಿಕಾರಿಗಳನ್ನು ತಮ್ಮದೇ



ವಿಧಾನಸೌಧದಲ್ಲಿ ಇಂದು ನಡೆದ ಸಿಇಒಗಳ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಡಾ. ಜಿ. ಪರಮೇಶ್ವರ್, ಎಂ.ಬಿ. ಪಾಟೀಲ್, ಕೆ.ಜೆ. ಜಾರ್ಜ್, ಪ್ರಿಯಾಂಕ್ ಖರ್ಗೆ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ರಜನೀಶ್ ಗೋಯಲ್, ಸಿಎಂ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ. ಅತೀಕ್ ಸೇರಿದಂತೆ ಸರ್ಕಾರದ ಹಿರಿಯ ಅಧಿಕಾರಿಗಳು ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಉಪಸ್ಥಿತರಿದ್ದರು.

ಆದ ದಾಟಿಯಲ್ಲಿ ತರಾಟೆಗೆ ತೆಗೆದುಕೊಂಡು ಉದಾಸೀನ, ನಿರ್ಲಕ್ಷ್ಯ, ಕರ್ತವ್ಯಲೋಪಕ್ಕೆ ಕೆಳಹಂತದ ಅಧಿಕಾರಿಗಳ ವಿರುದ್ಧ ಮಾತ್ರವಲ್ಲ, ಹಿರಿಯ ಅಧಿಕಾರಿಗಳನ್ನು ಹೊಣೆ ಮಾಡಿ ಕ್ರಮ ಕೈಗೊಳ್ಳುತ್ತೇನೆ ಎಂದು ಗುಡುಗಿದರು.ರಾಜಕಾರಣಿಗಳು ಮತ್ತು ಅಧಿಕಾರಿಗಳು ಇಬ್ಬರು ಜನಸೇವಕರು ಎಂಬುದನ್ನು ನೆನಪಿನಲ್ಲಿಟ್ಟುಕೊಂಡು ಜನಸೇವೆ ಮಾಡಬೇಕು ಎಂದು ಹೇಳಿದ ಅವರು, ಜಿಲ್ಲಾಧಿಕಾರಿಗಳಿಗೆ ಮಹಾರಾಜರು ಎನ್ನುವ ಭಾವನೆ ಇದ್ದರೆ, ಅಭಿವೃದ್ಧಿ ಮತ್ತು ಪ್ರಗತಿ ಸಾಧ್ಯವಿಲ್ಲ ಎಂದರು.ಸರ್ಕಾರದ ಕಾರ್ಯಕ್ರಮಗಳು, ಯೋಜನೆಗಳು ಜನಸಾಮಾನ್ಯರಿಗೆ ತಲುಪಲು ಅಧಿಕಾರಿಗಳು ಕ್ರಿಯಾಶೀಲತೆಯಿಂದ, ಸಮನ್ವಯತೆಯಿಂದ ಕೆಲಸ ಮಾಡಬೇಕು. ಆಗ ಮಾತ್ರ ಜನಕಲ್ಯಾಣ ಸಾಧ್ಯ ಎಂದು ಹೇಳಿದರು.ಜನಸಂಪರ್ಕ, ಜನಸ್ಪಂದನ ಸಭೆಯಲ್ಲಿ 15 ರಿಂದ 20 ಸಾವಿರ ಅರ್ಜಿಗಳು ಬರುತ್ತವೆ. ನೀವು ಸ್ಥಳೀಯವಾಗಿ ಸರಿಯಾಗಿ ಕೆಲಸ ಮಾಡಿದ್ದರೆ ಇಷ್ಟೊಂದು ಮಂದಿ ನನ್ನ ಬಳಿ ಅಹವಾಲು ಹೊತ್ತು ಬರಲು ಸಾಧ್ಯ ಇರಲಿಲ್ಲ. ನೀವುಗಳು ಸರಿಯಾಗಿ ಕೆಲಸ ಮಾಡಿ. ಅರ್ಜಿಗಳನ್ನು ಫಾರ್ವರ್ಡ್ ಮಾಡಿ ಕೈ ತೊಳೆದುಕೊಳ್ಳುವುದು ಬೇಡ ಎಂದು ಮುಖ್ಯಮಂತ್ರಿಗಳು ಅಧಿಕಾರಿಗಳಿಗೆ ತಾಕೀತು ಮಾಡಿದರು. ಜನರ ಸಮಸ್ಯೆಗಳಿಗೆ ಪರಿಹಾರ ಕೊಡಿಸಲು ನಿಮ್ಮ ಕೈಯಲ್ಲಿ ಸಾಧ್ಯವಿಲ್ಲ ಎಂದರೆ ನೀವು ಅಧಿಕಾರಿಗಳಾಗಿ ಏಕೆ ಇರಬೇಕು. ಅರ್ಜಿಗಳನ್ನು ಫಾರ್ವರ್ಡ್ ಮಾಡಲು ನಿಮ್ಮ ಅಗತ್ಯ ಇದೆಯೇ ಎಂದು ಅವರು ಖಾರವಾಗಿ ಪ್ರಶ್ನಿಸಿದರು. ಜಿಲ್ಲಾಧಿಕಾರಿಗಳು, ತಹಶೀಲ್ದಾರ್‌ಗಳು ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಜನರನ್ನು ಭೇಟಿ ಮಾಡುತ್ತಿಲ್ಲ ಎಂದು ಅಸಮಾಧಾನ ಹೊರ ಹಾಕಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕೆಲವೆಡೆ ನಾನು ಕೊಟ್ಟಿರುವ ಸೂಚನೆಗಳನ್ನು ಸರಿಯಾಗಿ ಅಧಿಕಾರಿಗಳು ಪಾಲಿಸುತ್ತಿಲ್ಲ. ಪಿಡಿಓಗಳು, ಗ್ರಾಮ ಆಡಳಿತಾಧಿಕಾರಿಗಳು ತಾವು ಕೆಲಸ ಮಾಡುವ ಜಾಗದಲ್ಲೇ ವಾಸ್ತವ್ಯ ಇರಬೇಕು. ಈ ಬಗ್ಗೆ ಗಮನ ಹರಿಸಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಡೆಂಗ್ಯೂ ನಿಯಂತ್ರಣಕ್ಕೆ ತಾಕೀತು**

ರಾಜ್ಯದಲ್ಲಿ ಮಳೆಗಾಲ ಆರಂಭವಾಗಿದೆ. ಡೆಂಗ್ಯೂ ಜ್ವರದ ಹಾವಳಿ ಹೆಚ್ಚಾಗುತ್ತಿದೆ. ತಕ್ಷಣವೇ ಡೆಂಗ್ಯೂ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಿ, ಡೆಂಗ್ಯೂ ಜ್ವರ ನಿಯಂತ್ರಣಕ್ಕೆ ಬರಬೇಕು. ಇಲ್ಲದಿದ್ದರೆ ನಿಮ್ಮನ್ನೇ ಜವಾಬ್ದಾರರನ್ನಾಗಿ ಮಾಡುತ್ತೇನೆ ಎಂದು ಖಡಕ್ ಆಗಿ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಡೆಂಗ್ಯೂ ನಿಯಂತ್ರಣಕ್ಕೆ ಏನೆಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೋ ಅವುಗಳನ್ನೆಲ್ಲ ಕೈಗೊಳ್ಳಿ. ಹಾಗೆಯೇ ಡೆಂಗ್ಯೂ ಜ್ವರ ಪೀಡಿತರಿಗೆ ಆಸ್ಪತ್ರೆಗಳಲ್ಲಿ ಸೂಕ್ತ ಚಿಕಿತ್ಸೆಗೂ ವ್ಯವಸ್ಥೆ ಮಾಡಿಕೊಳ್ಳಿ ಎಂದು ಸೂಚನೆ ನೀಡಿದರು.ಡೆಂಗ್ಯೂ ನಿಯಂತ್ರಣಕ್ಕೆ ಸಮಾರೋಪಾದಿಯಲ್ಲಿ ಕೆಲಸ ಮಾಡಿ, ಜಿಲ್ಲಾ ಆರೋಗ್ಯಾಧಿಕಾರಿಗಳು ತಾಲ್ಲೂಕು ಮಟ್ಟದ ಅಧಿಕಾರಿಗಳ ಜತೆ ಸಭೆ ನಡೆಸಿ ಡೆಂಗ್ಯೂ ನಿಯಂತ್ರಣಕ್ಕೆ ಮುಂದಾಗಿ ಎಂದು ಕರೆ ನೀಡಿದರು.ಪ್ರತಿ ಜಿಲ್ಲಾಧಿಕಾರಿಗಳು, ಸಿಇಓಗಳು ತಾವು ಕೆಲಸ ಮಾಡುವ -3ನೇ ಪುಟಕ್ಕೆ

## ರೇಣುಕಾಸ್ವಾಮಿ ಕೊಲೆ ಮತ್ತಿಬ್ಬರು ಪೊಲೀಸ್ ವಶಕ್ಕೆ

ಬೆಂಗಳೂರು:-

ಚಿತ್ರದುರ್ಗದ ರೇಣುಕಾ ಸ್ವಾಮಿ ಕೊಲೆ ಪ್ರಕರಣದಲ್ಲಿ ಇನ್ನೂ ಇಬ್ಬರನ್ನು ಪೊಲೀಸರು ತೀವ್ರವಾಗಿ ಪ್ರಶ್ನಿಸುತ್ತಿದ್ದು, ಇಂದು ಮತ್ತೆ ಎರಡನೇ ಬಾರಿ ವಿಚಾರಣೆ ನಡೆಸಿದ್ದಾರೆ.ಪ್ರಕರಣದಲ್ಲಿ ಇವರಿಬ್ಬರ ಭಾಗೀದಾರಿಕೆ ಗಂಭೀರ ಸ್ವರೂಪದ್ದಾಗಿದ್ದು, ಇಬ್ಬರಿಗೂ ಬಂಧನ ಭೀತಿ ಎದುರಾಗಿದೆ ಇಬ್ಬರಲ್ಲಿ ಒಬ್ಬಾಕೆ ನಟ ದರ್ಶನ್ ಹಾಗೂ ಪವಿತ್ರ ಗೌಡ ಅನ್ನು ಭೇಟಿಯಾಗಲು ಜೈಲಿಗೆ ಬಂದವರಾದರೆ, ಮತ್ತೊಬ್ಬ ಕಾರ್ತಿಕ್ ಪುರೋಹಿತ್. ಈತನಿಗೆ ಇಂದು ನೊಟೀಸ್ ನೀಡಿ ವಿಚಾರಣೆ ನಡೆಸಿ ಮಾಹಿತಿಯನ್ನು ಸಂಗ್ರಹಿಸಲಾಗಿದೆ. ಕಳೆದ ಜು.6ರಂದು ಸುಮಾರು ನಾಲ್ಕೈದು ಗಂಟೆಗಳ ಕಾಲ ಪೊಲೀಸರು ವಿಚಾರಣೆ ಮಾಡಿದ್ದರು. ಶಾಸಕರೊಬ್ಬರ ಕಾರು ಚಾಲಕನಾಗಿರುವ ಕಾರ್ತಿಕ್ ಪುರೋಹಿತ್, ರೇಣುಕಾ ಸ್ವಾಮಿ ಮೃತದೇಹ ಬಿಸಾಡಿದ ಬಳಿಕ ಆರೋಪಿ ಪ್ರದೋಶ್ ಅನ್ನು ಪಿಕ್‌ಅಪ್ ಮಾಡಿದ್ದ. ತನ್ನದೇ ಕಾರಿನಲ್ಲಿ ಪ್ರದೋಶ್‌ನನ್ನು ಗಿರಿನಗರಕ್ಕೆ ಕರೆದುಕೊಂಡು ಬಂದಿದ್ದ.ಹೀಗಾಗಿ ಆವತ್ತು ಏನೆಲ್ಲಾ ಆಯ್ತು, ಕೊಲೆ ಯ ಮಾಹಿತಿ ಕಾರ್ತಿಕ್‌ಗೆ ಇರುವ ಮಾಹಿತಿ ಪಡೆಯುತ್ತಿದ್ದಾರೆ. ಕೊಲೆ ಮಾಹಿತಿ ಇದ್ದೂ ಪೊಲೀಸರಿಗೆ ತಿಳಿಸಲಿಲ್ಲ ವಾದರೆ ಸಂಕಷ್ಟ ಗ್ಯಾರಂಟಿ ಆಗಿದೆ. ಜೊತೆಗೆ ಎರಡು ದಿನಗಳ ಕಾಲ ಆರೋಪಿಗೆ ಆಶ್ರಯ ಕೊಟ್ಟಿರುವ ಶಂಕೆ ಇದೆ. ಆಶ್ರಯದ ಜೊತೆಗೆ ಹಣಕಾಸು ಸಹಾಯವೂ ಮಾಡಿರುವ ಅನುಮಾನ ಇದೆ. ಹೀಗಾಗಿ ಇಂದು ಮತ್ತೊಮ್ಮೆ ವಿಚಾರಣೆ ನಡೆಸಲಾಗಿದೆ.



ಜೊತೆಗೆ ಇಂದು ಪವಿತ್ರ ಗೌಡ ಆಪ್ತೆ ಸಮತಾ ವಿಚಾರಣೆ ಕೂಡ ನಡೆಯಲಿದೆ. ಈಗಾಗಲೇ ಸಮತಾ ಒಂದು ಬಾರಿ ವಿಚಾರಣೆಗೆ ಹಾಜರಾಗಿದ್ದಾಳೆ. ಈಕೆ ಆರೋಪಿ ಧನರಾಜ್‌ಗೆ 3 ಸಾವಿರ ರೂಪಾಯಿ ಹಣ ಕಳುಹಿಸಿದ್ದಳು. ಇದೇ ಹಣದಲ್ಲಿ ಧನರಾಜ್ ಎಲೆಕ್ಟ್ರಿಕ್ ಶಾಕ್ ಡಿವೈಸ್ ಖರೀದಿ ಮಾಡಿರುವ ಶಂಕೆ ಇದೆ. ಹೀಗಾಗಿ ಸಮತಾಳನ್ನು ಮತ್ತೆ ವಿಚಾರಣೆಗೆ ಪೊಲೀಸರು ಕರೆದಿದ್ದು, ಇಂದು ಹಾಜರಾಗಲು ಸೂಚಿಸಿದ್ದಾರೆ. ಬಸವೇಶ್ವರನಗರ ಪೊಲೀಸ್ ಠಾಣೆಯ ಎಸಿಪಿ ಕಚೇರಿಯಲ್ಲಿ ತನಿಖಾಧಿಕಾರಿ ಎಸಿಪಿ ಚಂದನ್ ಕುಮಾರ್ ಅವರ ಮುಂದೆ ಸಮತಾ ಹಾಜರಾಗಲಿದ್ದಾಳೆ.

## ಶಾಲಾ ಮಕ್ಕಳಿಂದ ಡೆಂಗ್ಯು ಜಾಗೃತಿ



ಬೆಂಗಳೂರು:-

ಸಾಂಕ್ರಾಮಿಕ ರೋಗಗಳಾದ ಡೆಂಗ್ಯು, ಚಿಕೂನ್ ಗುನ್ಯಾ, ಮಲೇರಿಯಾ ಬಗ್ಗೆ ಜನರು ಅರಿತು, ಸ್ವಚ್ಛತೆ ಕಾಪಾಡಿಕೊಳ್ಳಬೇಕು ಎಂದು ಶಾಲಾ ಮಕ್ಕಳು ಜನಜಾಗೃತಿ ಮೂಡಿಸಿದರು.ನಗರದಲ್ಲಿಂದು ಸಂಪಂಗಿ ರಾಮನಗರ ಬಿಬಿಎಂಪಿ ಸ್ಕೂಲ್ ವಿದ್ಯಾರ್ಥಿಗಳು ನಗರದಲ್ಲಿ ಡೆಂಗ್ಯೂ ಹೆಚ್ಚುತ್ತಿರುವುದರಿಂದ ಸಾರ್ವಜನಿಕರಿಗೆ ಅರಿವು ಮೂಡಿಸುವುದಕ್ಕಾಗಿ -3ನೇ ಪುಟಕ್ಕೆ

## ನರ್ಸಿಂಗ್ ಕಾಲೇಜು ವಿದ್ಯಾರ್ಥಿನಿ ಆತ್ಮಹತ್ಯೆ



ಬೆಂಗಳೂರು:-

ನರ್ಸಿಂಗ್ ಕಾಲೇಜು ವಿದ್ಯಾರ್ಥಿನಿಯೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವುದು ಜಾಲಹಳ್ಳಿ ಬಳಿ ನಡೆದಿದ್ದು,ತಡವಾಗಿ ಬೆಳಕಿಗೆ ಬಂದಿದೆ. ಮೂರು ದಿನಗಳ ಹಿಂದೆ ನರ್ಸಿಂಗ್ ಕಾಲೇಜು ವಿದ್ಯಾರ್ಥಿನಿ ದಿಯಾ ಮಂಡೋಲ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಪಶ್ಚಿಮ ಬಂಗಾಳ ಮೂಲದ ದಿಯಾ ಮಂಡೋಲ್ ಮದರ್ ಥೆರೆಸಾ ನರ್ಸಿಂಗ್ ಕಾಲೇಜಿನಲ್ಲಿ ಓದುತ್ತಿದ್ದಳು. ಕೌಟುಂಬಿಕ ಕಾರಣಕ್ಕೆ ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾಗಿದೆ. ಹಾಸ್ಟೆಲ್‌ನಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾಳೆ.

ಸಹಪಾಠಿಗಳು ರೂಮಿಗೆ ಬಂದು ನೋಡಿದಾಗ ಆತ್ಮಹತ್ಯೆ ಮಾಡಿಕೊಂಡಿರುವುದು ಬೆಳಕಿಗೆ ಬಂದಿದೆ. ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಜಾಲಹಳ್ಳಿ ಠಾಣೆ ಪೊಲೀಸರು ಭೇಟಿ ನೀಡಿ ಧಾವಿಸಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿ ತನಿಖೆಯನ್ನು ಕೈಗೊಂಡಿದ್ದಾರೆ.

## ಮದ್ಯ ಹಂಚಿಕೆ: ನಡ್ಡಾ ಉತ್ತರಕ್ಕೆ ಡಿಕೆಶಿ ಆಗ್ರಹ



ಬೆಂಗಳೂರು:-

ಬಿಜೆಪಿ ಸಂಸದ ಡಾ ಕೆ ಸುಧಾಕರ್ ಅವರು ಕಾರ್ಯಕರ್ತರಿಗೆ ಮದ್ಯ ಹಂಚಿಕೆ ಮಾಡಿರುವ ಬಗ್ಗೆ ಆ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರು ಉತ್ತರಿಸಬೇಕು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ವಿಧಾನಸೌಧದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೆಲಮಂಗಲದಲ್ಲಿ ಬಿಜೆಪಿ ಕಾರ್ಯಕ್ರಮದಲ್ಲಿ ಮದ್ಯ ಹಂಚಿಕೆ ಮಾಡಿರುವ ಹಿನ್ನೆಲೆಯಲ್ಲಿ ಪ್ರಕರಣ ದಾಖಲಿಸುವುದು ಬೇರೆ ವಿಚಾರ. ಆದರೆ ಬಿಜೆಪಿ ಪ್ರಮುಖ ನಾಯಕರು ಇದಕ್ಕೆ ಸ್ಪಷ್ಟನೆ ನೀಡಬೇಕು. ಬಿಜೆಪಿಯ ಇಂಥ ಸಂಸ್ಕೃತಿ ಬಗ್ಗೆ ಸ್ಥಳೀಯ ಬಿಜೆಪಿ ನಾಯಕರಿಗಿಂತ ರಾಷ್ಟ್ರೀಯ ನಾಯಕರು ಉತ್ತರಿಸಬೇಕು ಎಂದು ತಿಳಿಸಿದರು.

## ನಡು ರಸ್ತೆಯಲ್ಲಿ ವಿದ್ಯಾರ್ಥಿನಿಯರಿಗೆ ಕಾಮುಕನ ಕಿರುಕುಳ

ಬೆಂಗಳೂರು:-

ಬೈಕ್‌ನಲ್ಲಿ ಬರುವ ಕಾಮುಕನೋರ್ವ ವಿ.ವಿ. ಪುರಂ ರಸ್ತೆಯಲ್ಲಿ ಓಡಾಡುವ ವಿದ್ಯಾರ್ಥಿನಿಯರ ಮುಂಭಾಗ ಖಾಸಗಿ ಅಂಗ ಪ್ರದರ್ಶಿಸಿ ಕಿರುಕುಳ ನೀಡುತ್ತಿರುವುದು ಪತೆ ್ತ ಯಾಗಿದೆ. ವಿದ್ಯಾರ್ಥಿನಿಯರೇ ಹೆಚ್ಚಾಗಿರುವ ಕಾಲೇಜುಗಳನ್ನು ಗುರಿಯಾಗಿಸಿಕೊಂಡು ರಸ್ತೆಗಿಳಿಯುವ ಕಾಮುಕ, ಮುಖಕ್ಕೆ ಬಟ್ಟೆ ಕಟ್ಟಿಕೊಂಡು ಬಂದು ಯುವತಿಯರಿರುವ ಕಡೆ ಬೈಕ್ ನಿಲ್ಲಿಸಿ ಮರ್ಮಾಂಗ ತೋರಿಸಿ ಪರಾರಿಯಾಗುತ್ತಾನೆ. ಕಾಮುಕನ ಕೃತ್ಯ ಮೊಬೈಲ್?ನಲ್ಲಿ ಸೆರೆಯಾಗಿದ್ದು,ನೊಂದ ವಿದ್ಯಾರ್ಥಿನಿಯರು ವಿ.ವಿ.ಪುರಂ ಪೊಲೀಸರಿಗೆ ದೂರು ನೀಡಿ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದಾರೆ. ಪೊಲೀಸರು ಘಟನೆ ಬಗ್ಗೆ ಮಾಹಿತಿ ಕಲೆ ಹಾಕುತ್ತಿದ್ದು ಕಾಮುಕನಿಗಾಗಿ ಹುಡುಕಾಟ ನಡೆಸುತ್ತಿದ್ದಾರೆ.

**ಪುಂಡರಿಂದ ಕಿರಿಕಿರಿ:**

ನಾಗರಭಾವಿ ಹೊರವರ್ತುಲ ರಸ್ತೆಯ ಬಳಿ ಕುಟುಂಬದವರ ಜೊತೆ ಕಾರಿನಲ್ಲಿ ಹೋಗುತ್ತಿದ್ದ ಮಹಿಳೆಗೆ ಕೆಲ ಪುಂಡರು ವ್ಹೀಲಿಂಗ್ ಮಾಡಿ ಭಯ ಪಡಿಸಿ ಪುಂಡಾಟ ಮೆರೆದ ಘಟನೆ ನಿನ್ನೆ ರಾತ್ರಿ 11.40ರ ವೇಳೆ ನಡೆದಿದೆ. ನೀತು ಬಳೆಗಾರ್ ಎಂಬ ಮಹಿಳೆ ತನ್ನ ಕುಟುಂಬಸ್ಥರ ಜೊತೆ ಕಾರಿನಲ್ಲಿ ಹೋಗುತ್ತಿದ್ದಾಗ, ಕೆಲ ಪುಂಡರು -3ನೇ ಪುಟಕ್ಕೆ

## ಮುಂಗಾರು ಚುರುಕು:10 ಜಿಲ್ಲೆಗಳಲ್ಲಿ 6 ದಿನ ಮಳೆ



ಬೆಂಗಳೂರು:-

ರಾಜ್ಯದ ಬಹುತೇಕ ಭಾಗಗಳಲ್ಲಿ ಮುಂಗಾರು ಮಾರುತಗಳು ತೀವ್ರಗೊಂಡಿದ್ದು, 10 ಜಿಲ್ಲೆಗಳಲ್ಲಿ ಮುಂದಿನ 6 ದಿನಗಳ ಕಾಲ ಭಾರಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.ದ.ಕನ್ನಡ, ಉ. ಕನ್ನಡ, ಉಡುಪಿ, ಬೆಳಗಾವಿ. ಬೀದರ್, ಕಲಬುರಗಿ, ಯಾದಗಿರಿ, ಚಿಕ್ಕಮಗಳೂರಿನಲ್ಲಿ ಅತೀ ಹೆಚ್ಚು ಮಳೆಯಾಗಲಿದೆ. ಧಾರವಾಡ, ಗದಗ, ಹಾವೇರಿ, ಕೊಪ್ಪಳ, ರಾಯಚೂರು, ವಿಜಯಪುರ, ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಿತ್ರದುರ್ಗ, ದಾವಣಗೆರೆ, ಹಾಸನ, ಕೊಡಗು, ಮಂಡ್ಯ, ಕೋಲಾರ, ರಾಮನಗರ ಹಾಗೂ ತುಮಕೂರಿನಲ್ಲಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನಲ್ಲೂ ಮೋಡ ಕವಿದ ವಾತಾವರಣವಿದ್ದು, ಹಲವೆಡೆ ಮಳೆಯಾಗಲಿದೆ.ರಾಜ್ಯದ ಹಲವೆಡೆ ಮುಂಗಾರು ಮಳೆ ಬಿರುಸುಗೊಂಡಿದೆ. ಕರಾವಳಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಮಳೆಯಿಂದ ಜನಜೀವನ ಅಸ್ತವ್ಯಸ್ತಗೊಂಡಿದ್ದು, ಮಂಗಳೂರು ತಾಲ್ಲೂಕಿನಲ್ಲಿ ಭಾರಿ ಮಳೆಯಾಗುತ್ತಿದ್ದು, ರೆಡ್‌ಅಲರ್ಟ್ ಘೋಷಣೆಯಾಗಿದ್ದು, ಈ ಹಿನ್ನೆಲೆಯಲ್ಲಿ ತಾಲ್ಲೂಕಿನ ಪಿಯುಸಿ ತರಗತಿಗಳಿಗೆ ಇಂದು ರಜೆ ಘೋಷಿಸಲಾಗಿದೆ.ಜಿಲ್ಲೆಯಾದ್ಯಂತ ಭಾರಿ ಮಳೆ ಸುರಿಯುತ್ತಿರುವುದರಿಂದ ಸಾರ್ವಜನಿಕರು ನದಿಗಳ, ತೋಡುಗಳ ಮತ್ತು ವಿದ್ಯುತ್ ಕಂಬ, ತಂತಿ ಸಮೀಪ ಹೋಗದಂತೆ ಎಚ್ಚರಿಕೆ ಸಂದೇಶ ರವಾನಿಸಲಾಗಿದೆ.ಬೆಳ್ತಂಗಡಿಯಲ್ಲೂ ಭಾರಿ ಮಳೆ ಸುರಿಯುತ್ತಿದ್ದು, ಭಾರಿ ಮಳೆಗೆ ದೇಗುಲದ ಪುರಾತನ ಅಶ್ವತ್ಥವೃಕ್ಷ ಧರೆಗುರುಳಿ ಬಿದ್ದಿದೆ. ಕಲ್ಮಂಜ ಗ್ರಾಮದ ಇತಿಹಾಸ ಪ್ರಸಿದ್ಧ ಸಂಗಮಕ್ಷೇತ್ರ ಬಜಿರಡ್ಕ ಸದಾಶಿವೇಶ್ವರ ದೇವಸ್ಥಾನದ ಮುಂಭಾಗ ಪುರಾತನ ಅಶ್ವತ್ಥವೃಕ್ಷ ಧರೆಗುರುಳಿ -3ನೇ ಪುಟಕ್ಕೆ

## ಗ್ರಾ. ಪಂ. ಸದಸ್ಯನ ಬರ್ಬರ ಹತ್ಯೆ

ಬೆಂಗಳೂರು:-

ಹಳೆ ವೈಷಮ್ಯದ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯತಿ ಸದಸ್ಯರೊಬ್ಬರನ್ನು ಮಚ್ಚು ಲಾಂಗ್ ನಿಂದ ಕೊಚ್ಚಿ ಭೀಕರವಾಗಿ ಕೊಲೆ ಮಾಡಲಾಗಿರುವ ದುರ್ಘಟನೆ ಹೊಸಕೋಟೆ ತಾಲೂಕಿನ ಬೈಲನರಸಾಪುರದಲ್ಲಿ ನಿನ್ನೆ ರಾತ್ರಿ ನಡೆದಿದೆ. ಗ್ರಾಮ ಪಂಚಾಯತಿ ಸದಸ್ಯ ಅಪಾಕ್ ಅಮಿರ್ ಖಾನ್ (45) ಕೊಲೆಯಾದವರು, ಕೃತ್ಯ ನಡೆಸಿ ಪರಾರಿಯಾಗಿರುವ ಮೆಹಬೂಬ್ ಬಂಧನಕ್ಕೆ ಪೊಲೀಸರು ತೀವ್ರ ಶೋಧ ಕೈಗೊಂಡಿದ್ದಾರೆ. ಅಮಿರ್ ಖಾನ್ ಗ್ರಾಮ ಪಂಚಾಯತಿ ಮುಂದೆ ಫೋನ್‌ನಲ್ಲಿ ಮಾತನಾಡುತ್ತಾ ರಾತ್ರಿ ನಿಂತಿದ್ದಾಗ ಏಕಾಏಕಿ ಮಚ್ಚು ಲಾಂಗ್‌ನಿಂದ ದಾಳಿ ಮಾಡಿ ಕೊಲೆ ಮಾಡಿ ಆರೋಪಿ ಪರಾರಿಯಾಗಿದ್ದಾನೆ. ನಂದಗುಡಿ ಪೊಲೀಸರು ಪ್ರಕರಣ ದಾಖಲಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ.

# ವಿಕಲಚೇತನರು, ಹಿರಿಯ ನಾಗರಿಕರ ಹೆಸರಲ್ಲಿ ಅಕ್ರಮ: ಕ್ರಮಕ್ಕೆ ಆಗ್ರಹ

ಕಲಬುರಗಿ:–

ಜಿಲ್ಲೆಯ ವಿಕಲಚೇತನರು ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಲ್ಲಿ ವ್ಯಾಪಕ ಅಕ್ರಮಗಳು ನಡೆದಿದ್ದು ಈ ಕುರಿತು ಕೂಡಲೇ ತನಿಖೆ ಕೈಗೊಂಡು ತಪ್ಪಿತಸ್ಥ ಅಧಿಕಾರಿ ಹಾಗೂ ಸಿಬ್ಬಂದಿ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ನವ ಕರ್ನಾಟಕ ಎಂಆರ್‌ಡಬ್ಲ್ಯು/ವಿಆರ್‌ಡಬ್ಲ್ಯು/ಯುಆರ್‌ಡಬ್ಲ್ಯು ವಿಕಲಚೇತನರ ಗೌರವಧನ ಕಾರ್ಯಕರ್ತರ ಸಂಘದ ಸಂಸ್ಥಾಪಕ ರಾಜ್ಯಾಧ್ಯಕ್ಷ ಅಂಬಾಜಿ ಮೇಟಿ ಜಿಲ್ಲಾಧಿಕಾರಿಗಳನ್ನು ಒತ್ತಾಯಿಸಿ ದ್ದಾರೆ.

ಈ ಕುರಿತು ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಇಲಾಖೆಯ ಜಿಲ್ಲಾ ಕಲ್ಯಾಣಾಧಿಕಾರಿ ಸಾದಿಕ್ ಹುಸೇನ್ ಖಾನ್ ಅವರು ಹಲವು ರೀತಿಯ ಅಕ್ರಮಗಳಲ್ಲಿ ತೊಡಗಿದು ದೈಹಿಕ ವಿಕಲಚೇತನರು, ದೃಷ್ಟಿ ವಿಕಲಚೇತನರು ಹಾಗೂ ಹಿರಿಯ ನಾಗರಿಕರಿಗೆ ತಲುಪಬೇಕಾದ ಸೌಲಭ್ಯಗಳನ್ನು ಒದಗಿಸದೆ ವ್ಯಾಪಕ ಅಕ್ರಮಗಳಲ್ಲಿ ತೊಡಗಿದ್ದಾರೆ. ಮೇಲಾಗಿ, ಇಲಾಖೆಯ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರು (ಎಂಆರ್‌ಡಬ್ಲ್ಯು), ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು (ವಿಆರ್‌ಡಬ್ಲ್ಯು) ಮತ್ತು ನಗರ ಪುನರ್ವಸತಿ ಕಾರ್ಯಕರ್ತರಿಗೆ (ಯುಆರ್‌ಡಬ್ಲ್ಯು) ಹಲವು ಬಗೆಯಲ್ಲಿ ಮಾನಸಿಕ ಕಿರುಕುಳ



ನೀಡುತ್ತಾ ಸಾರ್ವಭೌಮ ಅಧಿಕಾರಿಯಂತೆ ವರ್ತಿಸುತ್ತಿದ್ದಾರೆ. ಈ ಕುರಿತು ಈಗಾಗಲೇ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿ ಕ್ರಮಕ್ಕೆ ಒತ್ತಾಯಿಸಲಾಗಿದೆ ಎಂದು ಮಾಹಿತಿ ನೀಡಿದರು.

ಕಲಬುರಗಿಯ ಸರಕಾರಿ ಅಂಧ ಮಕ್ಕಳ (ಬಾಲಕರ) ವಸತಿ ನಿಲಯದ ನಾಲ್ವರು ಅಂಧ ವಿದ್ಯಾರ್ಥಿಗಳ ಮೇಲೆ ಡಿಸೆಂಬರ್ 1, 2023ರಂದು ನಿಷ್ಕಾರುಣ್ಯವಾಗಿ ಕ್ರಮಕೈಗೊಂಡು ಆ ಮಕ್ಕಳನ್ನು ಶಾಲೆಯಿಂದ ಹೊರಹಾಕಿ ಮನೆಗೆ ಕಳುಹಿಸಲಾಗಿದೆ.ಮೇಲಾಗಿ, ಈ ಬಡ ಮತ್ತು ಅಸಹಾಯಕ ಮಕ್ಕಳ ಮೇಲೆ ಕ್ರಮ ಕೈಗೊಳ್ಳುತ್ತಿರುವ ತಮ್ಮ ಧಾಟಿಯನ್ನು ಸಮರ್ಥಿಸಿಕೊಳ್ಳಲು ಎರಡು ವರ್ಷಗಳ ಹಿಂದಿನ ವಿಡಿಯೋಕ್ಲಿಪ್ಪಿಂಗ್ ಬಳಸಿಕೊಂಡು ಮಕ್ಕಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ. ಹೀಗೆ ಕ್ರಮ ಕೈಗೊಳ್ಳುವ ಸಂದರ್ಭದಲ್ಲಿ ಪುರಾವೆಯಾಗಿ ಬಳಸಿಕೊಂಡಿರುವ ವಿಡಿಯೋ ತುಣುಕನ್ನು ವಿಧಿ ವಿಜ್ಞಾನ ಸಂಸ್ಥೆಯ (ಫೋರೆನ್ಸಿಕ್ ಲ್ಯಾಬೊರೇಟರಿ) ತಪಾಸಣೆಗೆ ಒಳಪಡಿಸಿ ಸೂಕ್ಷ್ಮವಾಗಿ ಪರಾಮರ್ಶಿಸಬೇಕೆಂದು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದ ಮನವಿ ಪತ್ರದಲ್ಲಿ ಅಂಬಾಜಿ ಮೇಟಿಕೋರಿದ್ದಾರೆ. ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಈ ನಾಲ್ವರು ದೃಷ್ಟಿ ವಿಕಲ ಚೇತನ ಮಕ್ಕಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಂಡು ಅವರ ಭವಿಷ್ಯದೊಂದಿಗೆ ಚೆಲ್ಲಾಟ ಆಡಿದ್ದಾಗ್ಯೂ, ಈ ನಾಲ್ಕೂ ವಿದ್ಯಾರ್ಥಿಗಳು ಕಳೆದ ಶೈಕ್ಷಣಿಕ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಪಡೆದು ಉತ್ತೀರ್ಣರಾಗುವ ಮೂಲಕ ಗಮನ ಸೆಳೆದಿದ್ದಾರೆ ಎಂದು ಅವರು ಸಮಾಧಾನ ವ್ಯಕ್ತಪಡಿಸಿದರು.

**ನಿಯಮಬಾಹಿರ ಹರಾಜು:**

ಕಲಬುರಗಿಯ ಸರಕಾರಿಕಿವುಡ ಮತ್ತು ಮೂಕ ಮಕ್ಕಳ ಶಾಲೆಯಲ್ಲಿ ಜೂನ್ 21, 20 24 ರಂದು ಅಕ್ರಮವಾಗಿ ಹಳೆಯ ಪೀಠೋಪಕರಣಗಳ ಹರಾಜು ಪ್ರಕ್ರಿಯೆ ಕೈಗೊಳ್ಳಲಾಗಿದೆ. ಹೀಗೆ ಹರಾಜು ಪ್ರಕ್ರಿಯೆ ಕೈಗೊಳ್ಳುವುದಕ್ಕೂ ಮುನ್ನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮೂಲಕ ಪತ್ರಿಕಾ ಪ್ರಕಟಣೆ ಹೊರಡಿಸಿ, ಆ ನಿಟ್ಟಿನಲ್ಲಿಅಗತ್ಯ ಎನಿಸಿದರೆ ದಿನಪತ್ರಿಕೆಗಳಲ್ಲಿ ಜಾಹೀರಾತು ನೀಡಿದ ಬಳಿಕ ಹರಾಜು ಪ್ರಕ್ರಿಯೆ ಕೈಗೊಳ್ಳಬೇಕಾಗುತ್ತದೆ.ಆದರೆ, ಈ ನಿಟ್ಟಿನಲ್ಲಿಯಾವುದೇ ನಿಯಮಗಳನ್ನು ಪಾಲಿಸದೆ ಕೇವಲ ಕಚೇರಿಯ ಸೂಚನಾ ಫಲಕಕ್ಕೆ ನೋಟಿಸ್ ಲಗತ್ತಿಸಿದಂತೆ ಮಾಡಿ ಅಕ್ರಮವಾಗಿ ಹರಾಜು ಪ್ರಕ್ರಿಯೆ ಕೈಗೊಂಡಿದ್ದಾರೆ.ಮೇಲಾಗಿ, ಈ ಶಾಲೆಯ ಉತ್ತಮ ಗುಣಮಟ್ಟದ ಪೀಠೋಪಕರಣಗಳನ್ನು 'ಅನುಪಯುಕ್ತ' ಎಂದು ತಾವೇ ನಿರ್ಧಾರ ಕೈಗೊಂಡು ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಸರಕಾರದ ಬೊಕ್ಕಸಕ್ಕೆ ವಂಚನೆ ಮಾಡಲಾಗಿದೆ.ಸರಕಾರಿ ಅಂಧ ಮಕ್ಕಳ ಶಾಲೆಯಲ್ಲಿ ಸಹ ಇಂಥದ್ದೇ ಅಕ್ರಮ ಹರಾಜು ಪ್ರಕ್ರಿಯೆ ಮಾರ್ಚ್ 9, 2024 ರಂದು ಕೈಗೊಳ್ಳಲಾಗಿದೆ ಎಂದು ದೂರಿದರು. ಇನ್ನು, ಸರಕಾರಿಅಂಧ ಮಕ್ಕಳ ಶಾಲೆಯಲ್ಲಿ ಮೇಲಿಂದ ಮೇಲೆ ದುರಸ್ತಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ ಎಂದು ಪ್ರಸಕ್ತ 2024ನೇ ಸಾಲಿನಲ್ಲಿ ಈವರೆಗೆ ಒಟ್ಟು ಆರು ಬಾರಿ ದುರಸ್ತಿಯ ಹೆಸರಿನಲ್ಲಿ ಬಿಲ್ ಎತ್ತಲಾಗಿದೆ. ಒಂದೇ ಶಾಲೆಯಲ್ಲಿ ಕೇವಲ ಆರು ತಿಂಗಳ ಕಾಲಾವಕಾಶದಲ್ಲಿಆರು ಬಾರಿ ದುರಸ್ತಿ ಕಾರ್ಯಗಳನ್ನು ಕೈಗೊಳ್ಳುವುದು ತರ್ಕಬದ್ಧವೇ ಎಂಬುದನ್ನು ಪರಿಶೀಲಿಸಿ ಕಾನೂನು ಕ್ರಮ ಜರುಗಿಸ ಬೇಕೆಂದು ಕೋರಿದರು. ಗೌರವಾಧ್ಯಕ್ಷ ದತ್ತಾತ್ರೇಯ ಕುಡಕಿ, ಶಿವಕುಮಾರ್ ಮುಡ್ಡಿ, ತುಕಾರಾಂ ತುಳಸಿರಾಂ ಹಿರೋಳ್ಳಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ನಡೆಯದ ಕಾರ್ಯಾಗಾರ: ತನಿಖೆಗೆ ಆಗ್ರಹ ಮಾರ್ಚ್ 16, 2024ರಂದು ವಿಕಲಚೇತನರು ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು ಹಿರಿಯ ನಾಗರಿಕರ ಹಿತದೃಷ್ಟಿಯಿಂದ ಶ್ರವಣ ಸಾಧನಗಳ ವಿತರಣೆ ಕಾರ್ಯಾಗಾರ ಕೈಗೊಂಡಿರುವುದಾಗಿ ದಾಖಲೆ ಗಳನ್ನು ಸೃಷ್ಟಿಸಲಾಗಿದೆ.ಆದರೆ, ಹಿರಿಯ ನಾಗರಿಕರ ಕಾರ್ಯಾಗಾರ ಕೈಗೊಳ್ಳದೆ ಅಕ್ರಮ ಎಸಗಿರುವ ಕುರಿತು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿರುವ ಮನವಿ ಪತ್ರದಲ್ಲಿ ಎಲ್ಲವನ್ನೂ ವಿವರಿಸಲಾಗಿದೆ ಎಂದು ಅಂಬಾಜಿ ಮೇಟಿ ಹೇಳಿದರು.

ಹಿರಿಯ ನಾಗರಿಕರಿಗಾಗಿ ಕಾರ್ಯಾಗಾರ ಹಮ್ಮಿಕೊಂಡಿದ್ದೇ ನಿಜವಾಗಿದ್ದಲ್ಲಿ ಅಂದಿನ ಕಾರ್ಯಾಗಾರದ ಸಂಪೂರ್ಣ ವಿಡಿಯೋ ಚಿತ್ರೀಕರಣದ ದೃಶ್ಯಾವಳಿಯ ಪರಿಶೀಲನೆ ಕೈಗೊಳ್ಳುವುದರ ಜೊತೆಗೆ ಕಾರ್ಯಾಗಾರದ ಎಲ್ಲ ಫಲಾನುಭವಿಗಳ ಸೋಷಿಯಲ್ ಆಡಿಟಿಂಗ್ ಕೈಗೊಳ್ಳಬೇಕೆಂದು ಮೇಟಿ ಒತ್ತಾಯಿಸಿದರು.

## ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ವೈದ್ಯರ ಸಲಹೆ ಅವಶ್ಯಕ: ಡಾ.ಪಿ.ಎಸ್.ಶಂಕರ್




ಕಲಬುರಗಿ:–

ಸಮಾಜದಲ್ಲಿ ಪ್ರತಿಯೊಬ್ಬರೂ ಆರೋಗ್ಯವಂತರಾಗಿ ಜೀವನ ಸಾಗಿಸಲು ವೈದ್ಯರ ಸಲಹೆ ಮತ್ತು ಉಪಚಾರ ಪಡೆದುಕೊಳ್ಳುವುದು ಅವಶ್ಯಕವಾಗಿದೆ ಎಂದು ಖ್ಯಾತ ವೈದ್ಯಸಂಶೋಧಕ ಹಾಗೂ ನಾಡೋಜ ಡಾ.ಪಿ.ಎಸ್.ಶಂಕರ ಅವರು ಸಲಹೆ ಮಾಡಿದರು. ಅವರಿಂದು ಗಂಜ್ ಪ್ರದೇಶದ ಲ್ಲಿರುವ ನಗರೇಶ್ವರ ಶಾಲೆಯಲ್ಲಿ ಆರ್ಯ ವೈಶ್ಯ ಅಧಿಕಾರಿಗಳ ಮತ್ತು ವೃತ್ತಿ ನಿರತ್ರ ಸಂಘವು ಆಯೋಜಿಸಿದ ಉಚಿತ ಮೆಘಾ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡುತ್ತ, ಡೆಂಗ್ಯು, ಮಲೇರಿಯಾ, ಚಿನ್ ಗುನ್ಯಾದಂತಹ ರೋಗವನ್ನು ಬರದಂತೆ ತಡೆಗಟ್ಟುವಲ್ಲಿ ಸಾರ್ವಜನಿಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಡಾ.ಶಂಕರ್ ಕರೆ ನೀಡಿದರು. ಪ್ರತಿಯೊಬ್ಬರು ರೋಗ ವನ್ನು ಬರದಂತೆ ನೋಡಿಕೊಳ್ಳುವು ದರೊಂದಿಗೆ ಶುಚಿತ್ವ ಆಹಾರ ಸೇವನೆ ಮಾಡುವುದು ಅಗತ್ಯವಾಗಿದೆ ಎಂದು ಹೇಳಿದರು. ಆರೋಗ್ಯ ತಪಾಸಣಾ ಶಿಬಿರದ ಅಧ್ಯಕ್ಷತೆ ವಹಿಸಿದ್ದ, ಆರ್ಯ ವೈಶ್ಯ ಸಂಘದ ಜಿಲ್ಲಾಧ್ಯಕ್ಷ ರಾಘವೇಂದ್ರ ಮೈಲಾಪೂರ ಅವರು ಮಾತನಾಡುತ್ತ,ಗ್ರಾಮೀಣ ಪ್ರದೇಶದ ಹಾಗೂ ಪಟ್ಟಣದ ಜನತೆ ಈ ಉಚಿತ ಶಿಬಿರದ ಸದುಪಯೋಗ ಪಡೆದುಕೊಂಡು ಆರೋಗ್ಯ ಕಾಪಾಡಿ ಕೊಳ್ಳಬೇಕೆಂದು ಕರೆ ನೀಡಿದರು. ಸಂಘದ ಅಧ್ಯಕ್ಷ ಹಣಮಯ್ಯ ಬೇಲೂರೆಯವರು ಸರ್ವರನ್ನು ಸ್ವಾಗತಿಸಿದರು. ವೇದಿಕೆಯ ಮೇಲೆ ಹಿರಿಯ ವೈದ್ಯ ಡಾ.ವಿದ್ಯಾಸಾಗರ ಇಟಗಂಪಲ್ಲಿ, ರಾಘವೇಂದ್ರ ಗುಪ್ತಾ, ಡಾ.ಪ್ರವೀಣಕುಮಾರ, ಡಾ.ಗುರುರಾಜ ಪ್ರಮೋದ, ಡಾ.ರೇಣುಕಾ ಪ್ರಸಾದ, ಡಾ.ರಾಹುಲ ಮಂದಕನಳ್ಳಿ, ಡಾ.ಕೋಠಾರಿ ಸೇರಿದಂತೆ ಅನೇಕರು ಭಾಗವಹಿಸಿ, ರೋಗಿಗಳಿಗೆ ಪರೀಕ್ಷಿಸಿ ವೈದ್ಯಕೀಯ ಔಷಧಗಳನ್ನು ಉಚಿತವಾಗಿ ನೀಡಿದರು. ಕಾರ್ಯಕ್ರಮವನ್ನು ಸಂಗೀತಾ ಶ್ರೀಧರ ಅವರು ನಿರೂಪಣೆ ಮಾಡಿದರು.

# ಸಹಕಾರಿ ಚಳುವಳಿಯ ಯಶಸ್ವಿಗೆ ಜನರ ಶ್ರಮ ಅಗತ್ಯ

ಕಲಬುರಗಿ:–

ಭಾರತದಲ್ಲಿ ಸಹಕಾರಿ ಚಳುವಳಿ ಆರಂಭವಾಗಿ ಶತಮಾನ ಕಳೆದರು ಕೂಡಾ ಅದರ ತತ್ವ, ಆಶಯ ಜನಸಾಮಾನ್ಯರಿಗೆ ಮುಟ್ಟುತ್ತಿಲ್ಲ. "ತಾನು ಎಲ್ಲರಿಗಾಗಿ, ಎಲ್ಲರೂ ತನಗಾಗಿ" ಎಂಬ ಸಹಕಾರದ ತತ್ವದ ಅಡಿಯಲ್ಲಿ ಕಾರ್ಯನಿರ್ವಹಿಸುವ ಸಹಕಾರಿ ಸಂಘಗಳು ಮತ್ತು ಇಲಾಖೆಯ ಸದುಪಯೋಗವನ್ನು ಮಾಡಿಕೊಳ್ಳಬೇಕು. ಸಹಕಾರಿ ಚಳುವಳಿಯ ಯಶಸ್ವಿಗೆ ಇಲಾಖೆ, ಸಂಘಗಳ ಜೊತೆಗೆ ಜನರು ಶ್ರಮ ವಹಿಸಬೇಕಾಗಿದೆ ಎಂದು ಜಿಲ್ಲಾ ಸಹಕಾರ ಸಂಘಗಳ ಲೆಕ್ಕ ಪರಿಶೋಧನಾ ಉಪನಿರ್ದೇಶಕ ಸುಭಾಷ್ಚಂದ್ರ ಎಸ್.ಬರ್ಮಾ ಹೇಳಿದರು.

ನಗರದ ಮಿನಿ ವಿಧಾನಸೌಧದಲ್ಲಿರುವ ಜಿಲ್ಲಾ ಸಹಕಾರ ಸಂಘಗಳ ಲೆಕ್ಕ ಪರಿಶೋಧನಾ ಕಚೇರಿಯಲ್ಲಿ 'ಸಹಕಾರ ಇಲಾಖೆ', 'ಜಯಾ ಹರಿಜನ–ಗಿರಿಜನ ಮಹಿಳಾ ವಿವಿದೋದ್ದೇಶ ಸಹಕಾರ ಸಂಘ', 'ಸಿದ್ಧಾರ್ಥ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಪತ್ತಿನ ಸಹಕಾರ ಸಂಘ' ಮತ್ತು 'ಬಸವೇಶ್ವರ ಸಮಾಜ ಸೇವಾ ಬಳಗ' ಇವುಗಳು ಸಂಯುಕ್ತವಾಗಿ ಭಾನುವಾರ ಏರ್ಪಡಿಸಿದ್ದ 'ಅಂತಾರಾಷ್ಟ್ರೀಯ ಸಹಕಾರ ದಿನಾ ಚರಣೆ' ಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ರಾಷ್ಟ್ರದ ಜನಸಾಮಾನ್ಯರ ಆರ್ಥಿಕ ಜೀವನದ ಸುಗಮ ನಿರ್ವಹಣೆಗೆ ಸಹಾಯಕರವಾಗಿ ಸಹಕಾರಿ ಸಂಸ್ಥೆಗಳು ಸೇವೆ ಸಲ್ಲಿಸುತ್ತಿವೆ. ಜನರು ಸಕ್ರಿಯವಾಗಿ ಭಾಗವಹಿಸಬೇಕು. ಸದಸ್ಯರಾಗುವುದು, ಸಂಘಗಳ ರಚನೆ, ಸ್ವಯಂ ಉದ್ಯೋಗವನ್ನು ಮಾಡುವ ಮೂಲಕ ಸ್ವಂತ ಬೆಳವಣಿಗೆಗೆ ಜೊತೆ ಸಂಘ–



ಸಂಸ್ಥೆಗಳನ್ನು ಅಭಿವೃದ್ಧಿಪಡಿಸಬೇಕು. ಸಹಕಾರ ಇಲಾಖೆಗೆ ಸಂಬಂಧಿಸಿದಂತೆ ಸರ್ಕಾರದ ವಿವಿಧ ಯೋಜನೆಗಳನ್ನು ಬಳಸಿಕೊಳ್ಳುವಂತೆ ತಿಳಿಸಿದರು.

ಸಹಕಾರಿ ಧುರೀಣ ಡಾ.ಸುನೀಲ ಕುಮಾರ ಎಚ್.ವಂಟಿ ಮಾತನಾಡಿ, 'ಸಹಕಾರ' ಎಂಬ ಶಬ್ದವೇ ಬಹಳ ಅದ್ಭುತವಾದದ್ದು. ಎಲ್ಲೆಡೆ ಸಹಕಾರವಿರಬೇಕು. 'ವಸ್ತು ವಿನಿಯಮ ಪದ್ಧತಿ'ಯಿಂದ 'ಹಣ ವಿನಿಮಯ ಪದ್ಧತಿ'ಯೆಡೆಗೆ ಜನಸಾಮಾನ್ಯರನ್ನು ಸೆಳೆದು, ಆರ್ಥಿಕ ಜ್ಞಾನವನ್ನುಂಟು ಮಾಡುವಲ್ಲಿ ಸಹಕಾರ ಚಳುವಳಿ ಪಾತ್ರವಹಿಸಿದೆ. ಸಹಕಾರಿ ಸಂಸ್ಥೆಗಳ ಪಾತ್ರದ ಬಗ್ಗೆ ವ್ಯಾಪಕವಾದ ಜನಜಾಗೃತಿಯಾಗಬೇಕಾಗಿದೆ. ಈ ಕೇತ್ರವನ್ನು ರಾಜಕೀಯ ಮುಕ್ತವಾಗಿ ಬೆಳೆಸಿದರೆ, ಇನ್ನೂ ಹೆಚ್ಚಿನ ಜನರಿಗೆ ಅನಕೂಲವಾಗಲು ಸಾಧ್ಯವಾಗುತ್ತದೆ ಎಂದರು. ವಿಶೇಷ ಉಪನ್ಯಾಸ ನೀಡಿದ ಅರ್ಥ ಶಾಸ್ತ್ರ ಉಪನ್ಯಾಸಕ ಎಚ್.ಬಿ.ಪಾಟೀಲ, ಸಹಕಾರಿ ತತ್ವವು ವೈಯಕ್ತಿಕ ಸ್ವಾರ್ಥವನ್ನು ಬಿಟ್ಟಿ ಪರಸ್ಪರ ಬೆರೆ ಯುವುದುನ್ನು ಕಲಿಸುತ್ತದೆ. ಆರ್ಥಿಕ ಸ್ಥಿತಿ ಸುಧಾರಿಸುತ್ತದೆ. ಪ್ರಜಾಪ್ರಭುತ್ವ ಸಂಸ್ಥೆಯಾಗಿದೆ. ಸ್ವಸಹಾಯ ಮತ್ತು ಪರಸ್ಪರ ಸಹಾಯದ ಗುಣವನ್ನು ಹೊಂದಿದೆ. ಸೇವೆಯೇ ಮುಖ್ಯ ಗುರಿಯಾಗಿದ್ದು, ಲಾಭ ಗಳಿಕೆ ಗೌಣವಾಗಿದೆ. ಅಗ್ಗದ ಸಾಲ ಸೌಲಭ್ಯ ದೊರೆಯುತ್ತದೆ. ಉಳಿತಾಯ ಹಾಗೂ ಹೂಡಿಕೆಗೆ ಉತ್ತೇಜನ ನೀಡುತ್ತದೆ. ಸಹಕಾರಿ ಸಂಘಗಳು ವಿಶೇಷವಾಗಿ ರೈತರು, ಜನಸಾಮಾನ್ಯರಿಗೆ ತುಂಬಾ ಪ್ರಯೋಜನೆಯಾಗಿವೆ. ಆದರೆ ರಾಜಕೀಯ ಹಸ್ತಕ್ಷೇಪ, ಬಂಡವಾಳದ ಕೊರತೆ, ಭ್ರಷಾಚಾರ, ತರಬೇತಿಯ ಅಭಾವ, ವಸೂಲಾಗದ ಸಾಲದ ಬಾಕಿ, ಸಹಕಾರಿ ತತ್ವದ ಅರಿವಿನ ಕೊರತೆಯಂತಹ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇವುಗಳ ಪರಿಹಾರ ದತ್ತ ಚಿತ್ತ ಹರಿಸಿ, ಸಹಕಾರಿ ಕ್ಷೇತ್ರ ಅಭಿವೃದ್ಧಿಪಡಿಸಬೇಕಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸಹಕಾರಿ ಧುರೀಣ ಅಶೋಕ ಕಂಟೆಗೋಳ, ನಿವೃತ್ತ ಕೃಷಿ ಅಧಿಕಾರಿ ಶಿವಯೋಗೆಪ್ಪಾ ಎಸ್.ಬಿರಾದಾರ, ನಿವೃತ್ತ ಮುಖ್ಯ ಶಿಕ್ಷಕ ಬಸಯ್ಯಸ್ವಾಮಿ ಹೊದಲೂರ, ಮುಖ್ಯ ಶಿಕ್ಷಕ ದೇವೇಂದ್ರಪ್ಪ ಗಣ ಮುಖಿ, ಪ್ರಾಂಶುಪಾಲೆ ಸುಮಿತ್ರಾ ಗಾಯಕವಾಡ, ಸಹಕಾರಿ ಕ್ಷೇತ್ರದ ಸಂಶೋಧನಾರ್ಥಿ ಮಾಲಾಶ್ರೀ ಎಸ್. ಭಜಂತ್ರಿ, ಶ್ವೇತಾ ಗಾಯಕವಾಡ ಸೇರಿದಂತೆ ಇನ್ನಿತರರಿದ್ದರು.

# ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯಿಂದ ಸಂವಿಧಾನದ 371 (ಜೆ) ವಿಧಿಯ ನಿಬಂಧನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಒತ್ತಾಯ

ಕಲಬುರಗಿ:–

ಹೈದ್ರಾಬಾದ್ ಕರ್ನಾಟಕ ಹೋರಾಟ ಸಮಿತಿಯು, ಬೆಂಗಳೂರಿನಲ್ಲಿ ಕಲ್ಯಾಣ ಕರ್ನಾಟಕ ಭಾಗದ ಚುನಾಯಿತ ಪ್ರತಿನಿಧಿಗಳು ಮತ್ತು ಸಚಿವರ ಸಭೆ ನಡೆಸಿ, ಸಚಿವರು, ಶಾಸಕರು ಮತ್ತು ಸಮಿತಿಯ ಸದಸ್ಯರನ್ನೊಳಗೊಂಡ ನಿಯೋಗದ ಮೂಲಕ, ಸಂವಿಧಾನದ 371 (ಜೆ) ವಿಧಿಯ ನಿಬಂಧನೆಗಳ ಅನುಷ್ಠಾನ ಮತ್ತು 371 (ಜೆ) ಹಾಗೂ ಅದರ ನಿಯಮಗಳು, ನಿಬಂಧನೆಗಳಲ್ಲಿ ಒದಗಿಸಿದಂತೆ ಕಲ್ಯಾಣ ಕರ್ನಾಟಕ ಪ್ರದೇಶದ ಜನರಿಗೆ ನೀಡಬೇಕಾದ ಎಲ್ಲಾ ಪ್ರಯೋಜನಗಳನ್ನು ವಿಸ್ತರಿಸುವುದಕ್ಕೆ ಒತ್ತಾಯಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಲು ನಿರ್ಧರಿಸಿದೆ. ಕಲಬುರಗಿ ನಗರದಲ್ಲಿ ಭಾನುವಾರ ನಡೆದ ಸಮಿತಿಯ ಉನ್ನತ ಮಟ್ಟದ ಕೋರ್ ಕಮಿಟಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಮಿತಿಯ ಗೌರವಾಧ್ಯಕ್ಷ ಶ್ರೀ ಬಸವರಾಜ ದೇಶಮುಖ ಹಾಗೂ ಅಧ್ಯಕ್ಷ ಲಕ್ಷ್ಮಣ ದಸ್ತಿ, ನಿಯೋಗವು ಬೆಂಗಳೂರಿಗೆ ಭೇಟಿ ನೀಡಲಿದೆ ಎಂದು ಹೇಳಿದರು. ಕಲ್ಯಾಣ ಕರ್ನಾಟಕ ಪ್ರದೇಶದಿಂದ ಆಯ್ಕೆಯಾದ ಸಚಿವರು ಮತ್ತು ಶಾಸಕರ ಸಭೆ ನಡೆಸಿ, ಹಳೇ ಮೈಸೂರು ಮತ್ತು ಕಿತ್ತೂರು ಕರ್ನಾಟಕ ಪ್ರದೇಶದಲ್ಲಿ ಪಟ್ಟಭದ್ರ ಹಿತಾಸಕ್ತಿಗಳು 371 (ಜೆ) ವಿಧಿಯ ಅನುಷ್ಠಾನವನ್ನು ಬುಡಮೇಲು ಮಾಡಲು ಮತ್ತು ಮೀಸಲಾತಿ ಹಕ್ಕುಗಳನ್ನು ನಿರಾಕರಿಸಲು ನಡೆಸಿದ ಸಂಘಟಿತ ಪ್ರಯತ್ನಗಳನ್ನು ತಿಳಿಸಲು, ಆರ್ಟಿಕಲ್ 371 (ಜೆ) ನಲ್ಲಿ ಪ್ರತಿಪಾದಿಸಲಾದ ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರದಲ್ಲಿನ ಮೀಸಲಾತಿಗಾಗಿ ಇವರೆಲ್ಲರ ತುರ್ತು ಹಸ್ತಕ್ಷೇಪದ



ಅಗತ್ಯವಿದೆ ಎಂದರು. ನಂತರ ಕಲ್ಯಾಣ ಕರ್ನಾಟಕ ಭಾಗದ ಸಚಿವರು ಮತ್ತು ಶಾಸಕರನ್ನೊಳಗೊಂಡ ನಿಯೋಗವು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿ, 371 (ಜೆ) ವಿಧಿಯ ನಿಬಂಧನೆಗಳ ಪರಿಣಾಮಕಾರಿ ಅನುಷ್ಠಾನದ ಅಗತ್ಯತೆ ಹಾಗೂ ವಿಶೇಷವಾಗಿ ಕಲ್ಯಾಣ ಕರ್ನಾಟಕ ಪ್ರದೇಶವನ್ನು ಹೊರತುಪಡಿಸಿ ಇತರ ಪ್ರದೇಶಗಳಲ್ಲಿ ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರದಲ್ಲಿ ಮೀಸಲಾತಿಯನ್ನು ವಿಸ್ತರಿಸಲು ನಿಯಮಗಳು ಮತ್ತು ನಿಬಂಧನೆಗಳ ಮೇಲೆ ವಿವಿಧ ನ್ಯಾಯಾಲಯಗಳು ಒದಗಿಸಿದ ನಮೂನೆಯಲ್ಲಿನ ಅಡಚಣೆಗಳನ್ನು ನಿವಾರಿಸುವಂತೆ ಒತ್ತಾಯಿಸಿ ಮನವಿ ಸಲ್ಲಿಸಲಾಗುವುದು ಎಂದು ಶ್ರೀ ದೇಶಮುಖ್ ಹೇಳಿದರು. ಇಡೀ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ತಜ್ಞರ ತಂಡವನ್ನು ರಚಿಸುವ ಮೂಲಕ ಎಲ್ಲಾ ಶಾಲಾ–ಕಾಲೇಜುಗಳಲ್ಲಿ ಸಮಿತಿಯಿಂದ ಬೃಹತ್ ಜಾಗೃತಿ ಅಭಿಯಾನವನ್ನು ಸಹ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಸಮಿತಿಯು 371 (ಜೆ) ನಿಬಂಧನೆಗಳ ಪರಿಣಾಮಕಾರಿ ಅನುಷ್ಠಾನದ ಅಗತ್ಯತೆಯ ಕುರಿತು ವಿಚಾರ ಸಂಕಿರಣವನ್ನು ಸಹ ನಡೆಸಲಿದೆ ಮತ್ತು ಅದನ್ನು ಉದ್ಘಾಟಿಸಲು ಎಐಸಿಸಿ ಅಧ್ಯಕ್ಷ ಮತ್ತು ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಶ್ರೀ ಮಲ್ಲಿಕಾರ್ಜುನ ಖರ್ಗೆ ಅವರನ್ನು ಆಹ್ವಾನಿಸಲಾಗುವುದು ಎಂದು ಹೇಳಿದರು. 371 (ಜೆ) ವಿಧಿಯಲ್ಲಿನ ನಿಬಂಧನೆಗಳ ಕುರಿತು ಪರಿಣಿತರಾದ ಶ್ರೀ ಬಸವರಾಜ ಕೊಣ್ಣೂರ ಅವರು, ಅನುಷ್ಠಾನದಲ್ಲಿ ಉದ್ಭವಿಸುವ ಎಲ್ಲಾ ವಿವಾದಗಳ ತೀರ್ಪುಗಾಗಿ 371 (ಜೆ) ನ ನಿಯಮಗಳು ಮತ್ತು ನಿಬಂಧನೆಗಳ ಪ್ರಕಾರ ನ್ಯಾಯ ಮಂಡಳಿಯ ಸಂವಿಧಾನದ ತುರ್ತು ಅಗತ್ಯವಿದೆ ಎಂದು ಹೇಳಿದರು. ನ್ಯಾಯಾಧಿಕರಣದ ನಿಬಂಧನೆಗಳು ಮತ್ತು ತೀರ್ಪು ಅಂತಿಮವಾಗಿರಬೇಕು. ಹೈದರಾಬಾದ್ ಕರ್ನಾಟಕ ಪ್ರದೇಶದ ಅಭ್ಯರ್ಥಿಗಳ ನೇಮಕಾತಿಗೆ ಗರಿಷ್ಠ ವಯೋಮಿತಿಯನ್ನು ಹೆಚ್ಚಿಸಬೇಕು ಮತ್ತು ಕಲ್ಯಾಣ ಕರ್ನಾಟಕ ಪ್ರದೇಶದ ವಿದ್ಯಾರ್ಥಿಗಳಿಗೆ 371 (ಜೆ) ಪ್ರಕಾರ ಗ್ರೇಸ್ ಅಂಕಗಳನ್ನು ನೀಡಬೇಕು. 371 (ಜೆ) ವಿಧಿಯ ನಿಯಮಗಳು ಮತ್ತು ನಿಬಂಧನೆಗಳು ತಕ್ಷಣ ಜಾರಿಗೆ ತರಬೇಕು ಎಂದು ಅವರು ಹೇಳಿದರು.

# ಬೆಳೆ ವಿಮೆ ಪ್ರಚಾರ ವಾಹನಕ್ಕೆ ಚಾಲನೆ

ಕಲಬುರಗಿ:–

ನಗರದ ಜಂಟಿ ಕೃಷಿ ನಿರ್ದೇಶಕರ ಕಾರ್ಯಾಲಯದಲ್ಲಿ ಕಲಬುರಗಿ ದಕ್ಷಿಣ ಮತಕ್ಷೇತ್ರದ ಶಾಸಕ ಅಲಮ ಪ್ರಭು ಪಾಟೀಲ್ ಅವರು 2024–25 ನೇ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯ ಪ್ರಚಾರ ವಾಹನಕ್ಕೆ ಚಾಲನೆ ನೀಡಿ ಬೆಳೆ ವಿಮೆಗೆ ಸಂಬಂಧಪಟ್ಟ ಪೋಸ್ಟರ ಹಾಗೂ ಹಸ್ತಪ್ರತಿ ಬಿಡುಗಡೆಗೊಳಿಸಿದರು. 2023–24ನೇ ಸಾಲಿನಲ್ಲಿ ದಕ್ಷಿಣ



ಮತ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ 28 ಗ್ರಾಮಗಳಲ್ಲಿ ಬೆಳೆ ಪರಿಹಾರ ಅಡಿಯಲ್ಲಿ 7898 ರೈತರಿಗೆ 8.78 ಕೋಟಿ ಹಾಗೂ ಬೆಳೆ ವಿಮೆ ಯೋಜನೆಯಡಿ 3770 ರೈತರಿಗೆ 2.65 ಕೋಟಿ ಮತ್ತು ತೊಗರಿ ಬೆಳೆ ನೆಟೆ ರೋಗದ ಪರಿಹಾರ 5139 ರೈತ ಫಲಾನುವಿಗಳಿಗೆ 5.01 ಕೋಟಿ ಹೀಗೆ ಒಟ್ಟು 16.807 ರೈತ ಫಲಾನುಭವಿಗಳಿಗೆ 16.45 ಕೋಟಿ ರೂಪಾಯಿಗಳನ್ನು ರೈತರ ಖಾತೆಗೆ ನೇರವಾಗಿ ಜಮಾ ಮಾಡಲಾಗಿದೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಜಂಟಿ ಕೃಷಿ ನಿರ್ದೇಶಕರು ಮಾತನಾಡಿ, ಎಲ್ಲಾ ರೈತರು ತಾವು ಬೆಳೆದ ಬೆಳೆಗಳಿಗೆ ವಿಮೆ ಮಾಡಿಸಬೇಕು ಎಂದು ಮನವಿ ಮಾಡಿಕೊಂಡರು. ತೊಗರಿ, ಹೆಸರು, ಉದ್ದು, ಸೋಯಾ, ಅವರೆ, ಎಳ್ಳು, ಹತ್ತಿ, ಬೆಳೆಗಳಿಗೆ ವಿಮೆ ಮಾಡಿಸಲು ಜು. 31 ಕೊನೆಯ ದಿನಾಂಕ ಆಗಿರುವುದರಿಂದ ಆದಷ್ಟು ಬೇಗ ಎಲ್ಲಾ ರೈತರು ತಮ್ಮ ವ್ಯಾಪ್ತಿಯಲ್ಲಿ ಬರುವ ಬ್ಯಾಂಕ/ಸಾಮಾನ್ಯ ಸೇವಾ ಕೇಂದ್ರ , ಅಂಚೆ ಕಛೇರಿಯಲ್ಲಿ ನೊಂದಣಿ ಮಾಡಲು ಕೋರಿದರು. ಬೆಳೆ ವಿಮೆ ಪರಿಹಾರ ಮತ್ತು ಇಲಾಖೆಯ ಯಾವುದೇ ಯೋಜನೆಯ ಲಾಭ ಪಡೆಯಬೇಕಾದರೆ ರೈತರು ಕಡ್ಡಾಯವಾಗಿ ಎಸ್‌ಐಡಿ ನೊಂದಣಿ ಮಾಡಬೇಕು ಹೆಚ್ಚಿನ ಮಾಹಿತಿಗಾಗಿ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗೆ ಸಂಪರ್ಕಿಸಿ ಮಾಹಿತಿ ಪಡೆಯಲು ಕೋರಲಾಗಿದೆ. ಈ ಸಂದರ್ಭದಲ್ಲಿ ಕೃಷಿ ಉಪ ನಿರ್ದೇಶಕ ಸೋಮಶೇಖರ ಬಿರಾದಾರ ಹಾಗೂ ಸಹಾಯಕ ಕೃಷಿ ನಿರ್ದೇಶಕ ಚಂದ್ರಕಾಂತ ಜೀವಣಗಿ, ಬೆಳೆ ವಿಮೆ ಪ್ರತಿನಿಧಿಗಳಾದ ಶಿವು ನರೋಣಾ ಮತ್ತು ಸೋಮಲಿಂಗಯ್ಯ ಹಾಗೂ ಕೃಷಿ ಅಧಿಕಾರಿಗಳಾದ ಅಬ್ದುಲ್ ಕರೀಂ ಮತ್ತು ಸಹಾಯಕ ಕೃಷಿ ಅಧಿಕಾರಿಗಳಾದ ರಾಹುಲ್ ಚವ್ಹಾಣ ಹಾಗೂ ಗೌಸ್ ಆಬೀದ, ರೈತರು ಮತ್ತು ಇಲಾಖಾ ಅಧಿಕಾರಿಗಳು ಉಪಸ್ಥಿತರಿದ್ದರು.

## ಒಂದನೇ ಪುಟದಿಂದ

# ಶಾಲಾ ಮಕ್ಕಳಿಂದ ಡೆಂಗ್ಯು ಜಾಗೃತಿ

ಡೆಂಗ್ಯೂ ತಡೆಗಟ್ಟುವ ಜನಜಾಗೃತಿ ನಡೆಯಿತು.ಸುಮಾರು 60 ವಿದ್ಯಾರ್ಥಿಗಳು ಸಕ್ರಿಯವಾಗಿ ಪಾಲ್ಗೊಂಡು, ತಲಾ 20 ಮನೆಗಳಂತೆ ನೂರಕ್ಕೂ ಹೆಚ್ಚು ಮನೆಗಳಿಗೆ ಆಶ್ರಿತ ರೋಗವಾಹಕ ರೋಗಗಳ ಕುರಿತ ಕರಪತ್ರಗಳನ್ನು ಹಂಚಿದರು.ಡೆಂಗ್ಯು, ಚಿಕೂನ್ ಗುನ್ಯ ಬಾರದಂತೆ ಯಾವುದೇ ಔಷಧ ಅಥವಾ ಚಿಕಿತ್ಸೆ ನೀಡಲು ಸಾಧ್ಯ ಇಲ್ಲ. ಆದರೆ, ಅದಕ್ಕೆ ಕಾರಣವಾಗುವ ಸೊಳ್ಳೆಗಳು ಉತ್ಪತ್ತಿ ಆಗದಂತೆ ಮುಂಜಾಗ್ರತೆ ವಹಿಸುವ ಮೂಲಕ ರೋಗ ಬಾರದಂತೆ ತಡೆಯಬಹುದು ಎಂದು ಜಾಗೃತಿ ಮೂಡಿಸಿದರು.

# ಜಿಲ್ಲಾಧಿಕಾರಿ ಮಹಾರಾಜನಲ್ಲ

ಜಿಲ್ಲೆಗಳ ಸಮಗ್ರ ಮಾಹಿತಿಗಳನ್ನು ಅಂಗೈಯಲ್ಲಿಟ್ಟುಕೊಂಡು ಉತ್ಸಾಹದಿಂದ ಕೆಲಸ ಮಾಡಬೇಕು. ಉದಾಸೀನ, ನಿರ್ಲಕ್ಷ್ಯ, ವಿಳಂಬ ಧೋರಣೆ ಸರಿಯಲ್ಲ. ಉತ್ಸಾಹದಿಂದ ಕೆಲಸ ಮಾಡಿದಾಗ ಮಾತ್ರ ಪ್ರಗತಿ ಮತ್ತು ಅಭಿವೃದ್ಧಿಯ ವೇಗ ಕಾಣಲು ಸಾಧ್ಯವಾಗುತ್ತದೆ ಎಂದರು.ಭ್ರಷ್ಟಾಚಾರ ನಿಯಂತ್ರಣಕ್ಕೂ ಗಮನ ಕೊಡಿ. ಹಿಂದೆ ಭ್ರಷ್ಟಾಚಾರ ಹೇಗಿತ್ತು, ಇಂದು ಹೇಗಿದೆ ಎಂದು ನೋಡಿದಾಗ ಕಾರ್ಯಾಂಗ ಮತ್ತು ಶಾಸಕಾಂಗ ಪರಿಣಾಮಕಾರಿಯಾಗಿ ಕೆಲಸ ಮಾಡುತ್ತಿಲ್ಲ ಎನ್ನುವುದು ಗೊತ್ತಾಗುತ್ತಿದೆ. ಕಾರ್ಯಾಂಗ, ಶಾಸಕಾಂಗ ಮತ್ತು ನ್ಯಾಯಾಂಗ ಪರಿಣಾಮಕಾರಿಯಾಗಿ ಕೆಲಸ ಮಾಡಬೇಕು. ಆಗಾದಾಗ ಪ್ರಗತಿ ಸಾಧ್ಯವಾಗುತ್ತದೆ ಎಂದರು. ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಕೆಲಸ ಮಾಡಿ ಸೂಚನೆ ನೀಡಿದರು. ರಾಜ್ಯದಲ್ಲಿ ಬಿತ್ತನೆ ಕಾರ್ಯ ಆರಂಭವಾಗಿದೆ. ರೈತರಿಗೆ ರಸಗೊಬ್ಬರ, ಬಿತ್ತನೆ ಬೀಜದ ಕೊರತೆ-ಯಾಗದಂತೆ ನೋಡಿಕೊಳ್ಳಿ. ಮಣ್ಣಿನ ಫಲವತತ್ತತೆ ಕಡಿಮೆಯಾಗುತ್ತಿದೆ. ಅದನ್ನು ಹೆಚ್ಚಿಸಲು ಪ್ರತಿ 2 ವರ್ಷಕ್ಕೊಮ್ಮೆ ಮಣ್ಣಿನ ಪರೀಕ್ಷೆ ಮಾಡುವಂತೆ ಸೂಚನೆ ನೀಡಿದ ಮುಖ್ಯಮಂತ್ರಿಗಳು, ರೈತರಿಗೆ ಮಣ್ಣಿನ ಆರೋಗ್ಯ ಕಾರ್ಡ್‌ನ್ನು ಕಡ್ಡಾಯವಾಗಿ ನೀಡುವಂತೆ ತಾಕೀತು ಮಾಡಿದರು.

**ತ್ವರಿತ ವಿಲೇವಾರಿ**

ತಹಶೀಲ್ದಾರ್ ನ್ಯಾಯಾಲಯಗಳಲ್ಲಿ, ಉಪವಿಭಾಗಾಧಿಕಾರಿಗಳ ಬಳಿ ಸಾವಿರಾರು ಪ್ರಕರಣಗಳು ಬಾಕಿ ಇವೆ. 5 ವರ್ಷಕ್ಕೂ ಮೇಲ್ಪಟ್ಟ ಪ್ರಕರಣಗಳು ಹಾಗೆಯೇ ಉಳಿದಿವೆ. ಜಿಲ್ಲಾಧಿಕಾರಿಗಳ ಬಳಿಯೂ ಭೂ ಪ್ರಕರಣಗಳು ಬಾಕಿ ಇವೆ. ಕೂಡಲೇ ಇವುಗಳನ್ನು ವಿಲೇವಾರಿ ಮಾಡಿ ಎಂದು ಸೂಚಿಸಿದರು.

ಜನ ಜಿಲ್ಲಾಧಿಕಾರಿ, ಉಪವಿಭಾಗಾಧಿಕಾರಿ, ತಹಶೀಲ್ದಾರ್ ಕಚೇರಿಗಳಿಗೆ ಅಲೆಯುವುದನ್ನು ತಪ್ಪಿಸಿ, ಅಧಿಕಾರಿಗಳು ಜನರ ಕೈಗೆ ಸಿಗಬೇಕು. ಇಲ್ಲದಿದ್ದರೆ ಏನು ಪ್ರಯೋಜನ ಎಂದು ಪ್ರಶ್ನಿಸಿದರು.ಅಧಿಕಾರಿಗಳನ್ನು ಟೀಕೆ ಮಾಡಲು ನಾನು ಈ ಸಭೆ ಕರೆದಿಲ್ಲ. ಅಭಿವೃದ್ಧಿ ಯಾವ ರೀತಿ ನಡೆದಿದೆ ಎಂಬುದನ್ನು ಪರಿಶೀಲಿಸಲು ಈ ಸಭೆ ಕರೆದಿದ್ದೇನೆ. ನಾವು ಅನೇಕ ಜನಪರ ಕಾರ್ಯಕ್ರಮಗಳನ್ನು ಜಾರಿ ಮಾಡಿದ್ದೇವೆ. ಇವುಗಳು ಜನರಿಗೆ ತಲುಪಬೇಕು. ಆ ರೀತಿ ಕೆಲಸ ಮಾಡಿ. 40 ವರ್ಷಗಳಿಂದ ಅಧಿಕಾರಿಗಳ ಕಾರ್ಯವೈಖರಿ ಗಮನಿಸುತ್ತಿದ್ದೇನೆ. ರಾಜಕಾರಣಿಗಳು, ಅಧಿಕಾರಿಗಳ ಅನುಭವದ ಮೇಲೆ ಆಡಳಿತ ಹೆಚ್ಚು ಪರಿಣಾಮಕಾರಿಯಾಗಬೇಕು. ಆದರೆ ನಿರೀಕ್ಷಿತ ಮಟ್ಟದಲ್ಲಿ ಈ ಕೆಲಸ ಆಗಿಲ್ಲ ಎಂದು ಬೇಸರದಿಂದ ಹೇಳಿದರು.ಎಸ್ಸೆಸ್ಸೆಲ್ಸಿ ಪರೀ-ಕ್ಷೆಯ ಫಲಿತಾಂಶ ಕುಸಿದ ಬಗ್ಗೆಯೂ ಅಸಮಾಧಾನ ಹೊರ ಹಾಕಿದ ಮುಖ್ಯಮಂತ್ರಿಗಳು, ಪರೀಕ್ಷಾ ಅಕ್ರಮಗಳ ನಿಯಂತ್ರಣದಿಂದ ಫಲಿತಾಂಶ ಕುಸಿತವಾಗಿದೆ ಎಂಬ ಸಬೂಬು ಬೇಡ. ಫಲಿತಾಂಶ ಹೆಚ್ಚಿಸಲು ಕ್ರಮ ಕೈಗೊಳ್ಳಿ ಎಂದು ಹೇಳಿದರು.ಜನಸ್ಪಂದನ ಅರ್ಜಿಗಳನ್ನು ಸಕಾರಾತ್ಮಕವಾಗಿ ವಿಲೇವಾರಿ ಮಾಡಿ. ಬಡವರ ಬಗ್ಗೆ ಅನುಕಂಪ ಇಟ್ಟುಕೊಂಡು ಕೆಲಸ ಮಾಡಿ. ಅಸಮಾನತೆಯನ್ನು ನೀಗಿಸಲು ನಾವೆಲ್ಲಾ ಒಂದುಗೂಡಿ ಕೆಲಸ ಮಾಡಬೇಕಿದೆ. ಬಸವಣ್ಣ, ಗಾಂಧೀಜಿ, ಅಂಬೇಡ್ಕರ್‌ರವರನ್ನು ಓದುತ್ತೇವೆ, ಸಂವಿಧಾನವನ್ನು ಅರಿತುಕೊಳ್ಳಬೇಕು ಎಂದು ಹೇಳುತ್ತೇವೆ. ಇದು ಕೇವಲ ಓದುವುದಕ್ಕಲ್ಲ, ಅನುಷ್ಠಾನ ಮಾಡುವುದಕ್ಕೆ ಎನ್ನುವುದನ್ನು ಅರಿತುಕೊಳ್ಳಿ ಎಂದು ಅಧಿಕಾರಿಗಳಿಗೆ ಕಿವಿಮಾತು ಹೇಳಿದರು.ರಾಜ್ಯದಲ್ಲಿ ಕಲುಷಿತ ನೀರು ಸೇವಿಸಿ ಹಲವು ಸಾವು-ನೋವು ಸಂಭವಿಸಿದೆ. ಇಂತಹ ಪ್ರಕರಣಗಳು ಸಂಭವಿಸಿದರೆ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳುತ್ತೇನೆ ಎಂದು ಹೇಳಿದ ಅವರು, ವಲಸೆ ಕುರಿಗಾರರ ಹಿತ ಕಾಪಾಡಿ. ವಲಸೆ ಕುರಿಗಳು ಆಕಸ್ಮಿಕವಾಗಿ ಮೃತಪಟ್ಟರೆ ಮಾಲೀಕರಿಗೆ ತ್ವರಿತ ಪರಿಹಾರ ನೀಡಿ ಎಂದರು.ಮಳೆಯ ಸಂದರ್ಭದಲ್ಲಿ ಭೂಕುಸಿತವಾಗುವ ಪ್ರದೇಶಗಳನ್ನು ಗುರುತಿಸಿ ಆ ಗ್ರಾಮದ ಜನರಿಗೆ ಶಾಶ್ವತ ಪರಿಹಾರ ಕೈಗೊಳ್ಳಿ. ಮಳೆಯಿಂದ ಮನೆ, ಬೆಳೆ ಹಾನಿ ಆಗಿರುವವರಿಗೆ ಕೂಡಲೇ ಪರಿಹಾರಗಳನ್ನು ನೀಡಿ. ಪಿಂಚಣಿ ಅರ್ಜಿಗಳನ್ನು 30 ದಿನದಲ್ಲಿ ವಿಲೇವಾರಿ ಮಾಡಿ ಎಂದು ಹೇಳಿದರು.ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಕಾನೂನು ಪ್ರಕಾರವೇ ಉದಾರತನದಿಂದ ವರ್ತಿಸಿ ತ್ವರಿತ ಪರಿಹಾರ ನೀಡಿ.

ಸಣ್ಣಪುಟ್ಟ ತಾಂತ್ರಿಕ ಕಾರಣಗಳಿಗಾಗಿ ಆತ್ಮಹತ್ಯೆ ಪರಿಹಾರದ ಅರ್ಜಿಗಳನ್ನು ತಿರಸ್ಕರಿಸದೆ ರೈತ ಕುಟುಂಬಗಳಿಗೆ ಸಹಾಯ ಮಾಡಿ ಎಂದು ಹೇಳಿದರು.

ಅರ್ಹರಿಗೆ ಬಿಪಿಎಲ್ ಕಾರ್ಡ್ ನೀಡಿ, ಅನರ್ಹರು ಬಿಪಿಎಲ್ ಕಾರ್ಡ್ ಪಡೆದಿದ್ದರೆ ಅವುಗಳನ್ನು ರದ್ದುಪಡಿಸಿ ಎಂದು ಹೇಳಿದ ಮುಖ್ಯಮಂತ್ರಿಗಳು, ರಾಜ್ಯದಲ್ಲಿ ಬರ ನಿರ್ವಹಣೆಯನ್ನು ಉತ್ತಮವಾಗಿ ಮಾಡಿದ್ದೀರಿ ಎಂದು ಅಧಿಕಾರಿಗಳನ್ನು ಶ್ಲಾಘಿಸಿದರು.ಮಳೆಗಾಲದಲ್ಲಿ ಯಾವುದೇ ಹಾನಿಯಾಗದಂತೆ ಎಚ್ಚರ ವಹಿಸಿ. ಹವಾಮಾನ ಇಲಾಖೆಯೊಂದಿಗೆ ನಿಕಟ ಸಂಪರ್ಕದಲ್ಲಿದ್ದು ಪರಿಸ್ಥಿತಿ ನಿಭಾಯಿಸಿ ಎಂದು ಅವರು ಸೂಚಿಸಿದರು.

ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಗೃಹ ಸಚಿವ ಡಾ. ಜಿ. ಪರಮೇಶ್ವರ್, ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್, ಕಂದಾಯ ಸಚಿವ ಕೃಷ್ಣ ಬೈರೇಗೌಡ, ಕೃಷಿ ಸಚಿವ ಚಲುವರಾಯಸ್ವಾಮಿ, ಎಪಿಎಂಸಿ ಸಚಿವ ಶಿವಾನಂದ ಪಾಟೀಲ್, ಕಾನೂನು ಸಚಿವ ಹೆಚ್.ಕೆ.ಪಾಟೀಲ್ ಸೇರಿದಂತೆ ಸರ್ಕಾರದ ಹಲವು ಸಚಿವರು, ಹಿರಿಯ ಅಧಿಕಾರಿಗಳು ಭಾಗಿಯಾಗಿದ್ದರು.

## ನಡು ರಸ್ತೆಯಲ್ಲಿ ವಿದ್ಯಾರ್ಥಿನಿಯರಿಗೆ ಕಾಮುಕನ ಕಿರುಕುಳ

ಪ್ಲೇಟ್ ಇಲ್ಲದ ಡ್ಯೂಕ್ ಬೈಕ್ ನಲ್ಲಿ ವ್ಹೀಲಿಂಗ್ ಮಾಡಿ ಪುಂಡಾಟ ಮೆರೆದಿದ್ದಾರೆ. ಈ ಬಗ್ಗೆ ಪ್ರಶ್ನೆ ಮಾಡಿದ್ದಕ್ಕೆ ಮಹಿಳೆಯನ್ನು ನಿಂದಿಸಿದ್ದಾರೆ. ಸದ್ಯ ನೀತು ಅವರು ಈ ಘಟನೆ ಸಂಬಂಧ ಪುಂಡರ ಫೋಟೋ ಸಮೇತ ನಗರ ಪೊಲೀಸ್ ಆಯುಕ್ತರಿಗೆ ದೂರು ನೀಡಿದ್ದಾರೆ. ಬೆಂಗಳೂರಿನಲ್ಲಿ ಸಾಮಾನ್ಯ ಜನರಿಗೆ ರಕ್ಷಣೆ ಇಲ್ಲ. ದಯ ಮಾಡಿ ಇಂತಹವರ ವಿರುದ್ದ ಕಠಿಣ ಕ್ರಮ ಕೈಗೊಳ್ಳಿ ಎಂದು ನೀತು ಅವರು ಎಕ್ಸ್ ಖಾತೆ ಮೂಲಕ ದೂರು ನೀಡಿ ಮನವಿ ಮಾಡಿದ್ದಾರೆ.

## ಮುಂಗಾರು ಚುರುಕು:10 ಜಿಲ್ಲೆಗಳಲ್ಲಿ 6 ದಿನ ಮಳೆ

800 ವರ್ಷಗಳ ಹಿಂದೆ ನಿರ್ಮಾಣಗೊಂಡ ಈ ದೇವಸ್ಥಾನ ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುವ ಪವಿತ್ರ ಶಿವನ ಸನ್ನಿಧ್ಧಿಯಾಗಿತ್ತು.

ಚಾರ್ಮಾಡಿಯಲ್ಲಿ ಹೆದ್ದಾರಿ ಕುಸಿತ

ಕಾಫಿನಾಡು ಚಿಕ್ಕಮಗಳೂರು ಜಿಲ್ಲೆಯಲ್ಲಿ ವರುಣನ ಆರ್ಭಟ ಮುಂದುವರೆದಿದ್ದು, ಭಾರಿ ಮಳೆಯಿಂದಾಗಿ ಚಾರ್ಮಾಡಿ ಹೆದ್ದಾರಿಯಲ್ಲಿ ಹಾಲೆಖಾನ್ ತಿರುವಿನ ಸಮೀಪ ಗುಡ್ಡ ಕುಸಿದು ಬಿದ್ದಿದ್ದು, ವಾಹನ ಚಲಿಸುತ್ತಿದ್ದ ವೇಳೆಯೆ ರಾಶಿ ರಾಶಿ ಮಣ್ಣು ಬಿದ್ದಿದ್ದರಿಂದ ಕಾರು ಚಾಲಕ ಬೆಚ್ಚಿ ಬಿದ್ದಿದ್ದಾನೆ.

ಕೆಲ ದಿನಗಳ ಹಿಂದೆಯಷ್ಟೆ ರಸ್ತೆ ಬಿರುಕು ಕಾಣಿಸಿಕೊಂಡ ಬೆನ್ನಲ್ಲೆ ಗುಡ್ಡ ಕುಸಿದು ಬಿದ್ದಿರುವುದು ಆತಂಕಕ್ಕೆ ಎಡೆಮಾಡಿಕೊಟ್ಟಿದೆ. ಸ್ಥಳಕ್ಕೆ ಹಿರಿಯ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

**ಜಲಾಶಯಗಳಿಗೆ ನೀರು:**

ಕಾವೇರಿ ಜಲಾನಯನ ಪ್ರದೇಶಗಳಲ್ಲಿ ಮಳೆ ಸುರಿಯುತ್ತಿರುವುದರಿಂದ ಕೆಆರ್‌ಎಸ್ ಮತ್ತು ಕಬಿನಿ ಅಣೆಕಟ್ಟೆಗಳು ಬಹುತೇಕ ಭರ್ತಿಯತ್ತ ಸಾಗಿದೆ. 37 ಟಿಎಂಸಿ ಸಾಮರ್ಥ್ಯವಿರುವ ಹೇಮಾವತಿ ಅಣೆಕಟ್ಟೆಗೆ ಪ್ರಸ್ತುತ 7,796 ಕ್ಯೂಸೆಕ್ ನೀರು ಹರಿದು ಬರುತ್ತಿದೆ. ಈಗ ಅಣೆಕಟ್ಟೆಯಲ್ಲಿ 17.599 ಟಿಎಂಸಿ ನೀರು ಸಂಗ್ರಹವಾಗಿದೆ.

ಮುಂಗಾರು ಮಳೆ ಮತ್ತಷ್ಟು ಬಿರುಸುಗೊಂಡರೆ ಈ ತಿಂಗಳಾಂತ್ಯದ ವೇಳೆ ಜಲಾಶಯ ಭರ್ತಿಯಾಗಲಿವೆ. ಕೆಆರ್‌ಎಸ್‌ನಲ್ಲಿ 37.04 ನೀರು ಸಂಗ್ರಹವಾಗಿದೆ. ಕಬಿನಿ ಜಲಾಶಯದಲ್ಲಿ 17.98 ನೀರು ಸಂಗ್ರಹವಾಗಿದೆ. ಹೇಮಾವತಿ 17.60, ಹಾರಂಗಿ 5.46ರಷ್ಟು ನೀರು ಸಂಗ್ರಹವಾಗಿದೆ.

# ಕರ್ನಾಟಕ ವೈದ್ಯಕೀಯ ಪರಿಷತ್ತು ನ್ಯಾಯಯುತವಾಗಿರಬೇಕು:ಕೆ ಮಹಾಂತೇಶ್ ಆಗ್ರಹ




ಬೆಂಗಳೂರು:-

ಕರ್ನಾಟಕ ವೈದ್ಯಕೀಯ ಪರಿಷತ್ತು ಮತ್ತು ಇತರ ಸಾಂವಿಧಾನಿಕ ಸಂಸ್ಥೆಗಳಿಗೆ ಕಾಲಬದ್ಧವಾಗಿ ನ್ಯಾಯಯುತ ಚುನಾವಣೆಗಳು ಮತ್ತು ನಾಮನಿರ್ದೇಶನಗಳಾಗಬೇಕು, ಅಧಿಕಾರದಲ್ಲಿರುವ ಸದಸ್ಯರು ಪಟ್ಟಭದ್ರರಾಗಿ ಕಾನೂನನ್ನು ದುರ್ಬಳಕೆ ಮಾಡಿ ಮುಂದುವರಿಯಲು ಅವಕಾಶವಿರಕೂಡದು

ಕರ್ನಾಟಕ ವೈದ್ಯಕೀಯ ಪರಿಷತ್ತು ಮತ್ತು ಇತರ ಸಂಸ್ಥೆಗಳಿಗೆ ನಾಮನಿರ್ದೇಶನ ಮಾಡುವಾಗ ಮಹಿಳೆಯರು, ಅಲ್ಪಸಂಖ್ಯಾತರು ಮತ್ತು ಪರಿಶಿಷ್ಟ ಜಾತಿ ಹಾಗೂ ವರ್ಗಗಳವರಿಗೆ ಸೂಕ್ತ ಪ್ರಾತಿನಿಧ್ಯ ದೊರೆಯುವುದನ್ನು ಕಾನೂನಿನ ತಿದ್ದುಪಡಿಗಳ ಮೂಲಕ ಕಡ್ಡಾಯಗೊಳಿಸಬೇಕು; ರಾಜಕೀಯವಾಗಿ ಪ್ರಬಲವಾಗಿರುವ ಸಮುದಾಯಗಳವರನ್ನಷ್ಟೇ ಇಂಥ ಸಂಸ್ಥೆಗಳಲ್ಲೂ ತುಂಬಿಸುವುದು ಅಪೇಕ್ಷಣೀಯವಲ್ಲ, ನ್ಯಾಯಯುತವಲ್ಲ.

ಕರ್ನಾಟಕ ವೈದ್ಯಕೀಯ ಪರಿಷತ್ತಿನಲ್ಲಿ ದೂರುಗಳ ವಿಚಾರಣೆಯಾಗುವಾಗ ಜನಸಾಮಾನ್ಯರ ಪ್ರತಿನಿಧಿಯಾಗಿ ನಿವೃತ್ತ ನ್ಯಾಯಾಧೀಶರು, ವಿಶ್ರಾಂತ ಕುಲಪತಿಗಳು ಅಥವಾ ತತ್ಸಮಾನರಾದವರು ವೀಕ್ಷಕರಾಗುವಂತೆ ಕಾಯಿದೆಯಲ್ಲಿ ಅವಕಾಶ ಕಲ್ಪಿಸಬೇಕು.

ರಾಜ್ಯದ ಎಲ್ಲಾ ಆಧುನಿಕ ವೈದ್ಯರನ್ನು ನೋಂದಾಯಿಸಿಕೊಂಡು, ವೃತ್ತಿ ಸಂಹಿತೆಯ ಉಲ್ಲಂಘನೆ ಹಾಗೂ ಚಿಕಿತ್ಸೆ-ಯ ಲೋಪಗಳ ಬಗ್ಗೆ ಜನಸಾಮಾನ್ಯರ ದೂರುಗಳನ್ನು ವಿಚಾರಣೆಗೊಳಪಡಿಸಿ ಸೂಕ್ತ ಕ್ರಮಗಳನ್ನು ಕೈಗೊಳ್ಳುವ ಅಧಿಕಾರವನ್ನು ಹೊಂದಿರುವ ಸ್ವಾ-ಯತ್ತ, ಅರೆ-ನ್ಯಾಯಿಕ, ಸಾಂವಿಧಾನಿಕ ಸಂಸ್ಥೆಯಾಗಿರುವ ಕರ್ನಾಟಕ ವೈದ್ಯಕೀಯ ಪರಿಷತ್ತು (ಕೆಎಂಸಿ) 13 ವರ್ಷಗಳ ಬಳಿಕ ಈಗ ತಾನೇ ಹೊಸ ಸದಸ್ಯರು ಹಾಗೂ ಅಧ್ಯಕ್ಷ, ಉಪಾಧ್ಯಕ್ಷರನ್ನು ಪಡೆದಿದೆ. ರಾಜ್ಯದ ವೈದ್ಯರಿಂದಲೇ ಚುನಾಯಿಸಲ್ಪಡುವ 12 ವೈದ್ಯರು ಹಾಗೂ ಸರಕಾರದಿಂದ ನಾಮ ನಿರ್ದೇಶನಗೊಳ್ಳುವ ಐದು ಸದಸ್ಯರನ್ನು ಹೊಂದಿರುವ ಕೆಎಂಸಿಯ ಚುನಾವಣೆಗಳು ಒಂದು ದಶಕದಷ್ಟು ತಡವಾದದ್ದು, ನಾಮನಿರ್ದೇಶನಗಳನ್ನು ಮಾಡುವಾಗ ಕಾಯಿದೆಯನ್ನು ಪಾಲಿಸದೇ ಇದ್ದದ್ದು, ಇವೆಲ್ಲಕ್ಕೂ ರಾಜ್ಯದ ಕೆಲವು ವೈದ್ಯರು ಎರಡೆ-ರಡು ಉಚ್ಚ ನ್ಯಾಯಾಲಯಗಳಲ್ಲಿ ಸುದೀರ್ಘವಾದ ಕಾನೂನು ಹೋರಾಟಗಳನ್ನು ನಡೆಸಬೇಕಾಗಿ ಬಂದದ್ದು ಎಲ್ಲಾ ಪ್ರಜ್ಞಾವಂತರನ್ನೂ ಕಾಡಬೇಕಾದ ಸಂಗತಿಯಾಗಿದೆ. ಇದೇ ಕೆಎಂಸಿಯೆದುರು ವೈದ್ಯಕೀಯ ನಿರ್ಲಕ್ಷ್ಯದ ಮುನ್ನೂರಕ್ಕೂ ಹೆಚ್ಚು ಪ್ರಕರಣಗಳು ವರ್ಷಗಟ್ಟಲೆಯಿಂದ ವಿಚಾರಣೆಗೆ ಬಾಕಿಯಿದ್ದು, ಈ ಹಿಂದಿನ ಸದಸ್ಯರು ವಿಚಾರಣೆಯನ್ನು ಮುಂದೂಡುತ್ತಲೇ ಹೋದುದರಿಂದ ಸಂತ್ರಸ್ತರಿಗೆ ಇದುವರೆಗೂ ನ್ಯಾಯ ದೊರೆತಿಲ್ಲ ಎನ್ನುವುದು ಇಂದಿನ ಪತ್ರಿಕೆಯಲ್ಲೇ ವರದಿಯಾಗಿರುವುದು ಈ ಸಾಂವಿಧಾನಿಕ ಸಂಸ್ಥೆಯು ನ್ಯಾಯ ಬದ್ಧವಾಗಿರಬೇಕಾದ ಮಹತ್ವ ವನ್ನು ತೋರಿಸುತ್ತದೆ. ಹೀಗೆ ವೈದ್ಯರಿಗಷ್ಟೇ ಅಲ್ಲ, ಜನರಿಗೂ ನ್ಯಾಯವೊದಗಿಸಬೇಕಾದ ಗುರುತರವಾದ ಜವಾಬ್ದಾರಿಯನ್ನು ಹೊಂದಿರುವ ವೈದ್ಯಕೀಯ ಪರಿಷತ್ತು ನ್ಯಾಯಬದ್ಧವಾಗಿ, ಪ್ರಾಮಾಣಿಕ ಸದಸ್ಯರನ್ನು ಹೊಂದಿರುವುದು ಅತ್ಯಗತ್ಯವಾಗಿ ರುವುದರಿಂದ ಇನ್ನಾದರೂ ಇಂಥ ಸಾಂವಿಧಾನಿಕ ಸಂಸ್ಥೆಗಳ ಬಗ್ಗೆ ಸರಕಾರವು ಹೆಚ್ಚು ಮುತುವರ್ಜಿಯನ್ನು ವಹಿಸಬೇಕೆಂದು ನಾವು ಒತ್ತಾಯಿಸುತ್ತಿದ್ದೇವೆ.

ಕೆಎಂಸಿಯಲ್ಲಿ 2011ರಲ್ಲಿ ಚುನಾಯಿತರಾಗಿ ಅಧಿಕಾರದಲ್ಲಿದ್ದವರು ಕಾಲಕ್ಕೆ ಸರಿಯಾಗಿ ಚುನಾವಣೆ ನಡೆಸದಿದ್ದುದರಿಂದ, ರಾಜ್ಯ ಸರಕಾರವೂ ನಿರಾಸಕ್ತವಾಗಿದ್ದುದರಿಂದ, ಕೆಲವು ವೈದ್ಯರು ಚುನಾವಣೆಗಾಗಿ ಆಗ್ರಹಿಸಿ ರಾಜ್ಯ ಉಚ್ಚ ನ್ಯಾಯಾಲಯದ ಮೊರೆ ಹೋಗಬೇಕಾಯಿತು. ಅದನ್ನು ಮನ್ನಿಸಿ ಚುನಾವಣೆ ನಡೆಸುವಂತೆ ನ್ಯಾಯಾಲಯವು ಆದೇಶಿಸಿದರೂ ಕೆಎಂಸಿಯ ಪದಾಧಿಕಾರಿಗಳು, ರಿಜಿಸ್ಟ್ರಾರ್ ಮತ್ತು ಸರಕಾರ ಎಲ್ಲರೂ ಅದನ್ನು ಕಡೆಗಣಿಸಿ ಚುನಾವಣೆ ನಡೆಸಲಿಲ್ಲ, ಆಗ ಆ ವೈದ್ಯರು ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಸಬೇಕಾಯಿತು. ಕೊನೆಗೆ ಉಚ್ಚ ನ್ಯಾಯಾಲಯದ ಕಟ್ಟಪ್ಪಣೆಯ ಮೇರೆಗೆ ಜನವರಿ 2020ರಲ್ಲಿ ಚುನಾವಣೆಗಳು ನಡೆದವು. ಆದರೆ ಪಟ್ಟಭದ್ರರಾಗಿ ಕುಳಿತಿದ್ದವರು ಹೊಸ ಸದಸ್ಯರು ಅಧಿಕಾರ ವಹಿಸದಂತೆ ಕಲ್ಬುರ್ಗಿ ಪೀಠದಿಂದ ತಡೆಯಾಜ್ಞೆ ತಂದರು. ಅದನ್ನು ವಿರೋಧಿಸಿ ಮತ್ತೆ ಹೋರಾಡಬೇಕಾಯಿತು. ಆಗಲೂ ಸರಕಾರವು ವಿಶೇಷ ಆಸಕ್ತಿಯನ್ನೇನೂ ತೋರಿಸಲಿಲ್ಲ. ಅಂತೂ ಕೊನೆಗೆ ನವೆಂಬರ್ 2023ರಲ್ಲಿ, ಚುನಾವಣೆಗಳಾಗಿ ಸುಮಾರು ನಾಲ್ಕು ವರ್ಷಗಳ ಬಳಿಕ, ಮಾನ್ಯ ನ್ಯಾಯಾಲಯವು ತಡೆಯಾಜ್ಞೆ ತೆರವುಗೊಳಿಸಿ ಚುನಾಯಿತ ಸದಸ್ಯರು ಅಧಿಕಾರ ವಹಿಸಿಕೊಳ್ಳುವಂತಾಯಿತು. ಹೊಸ ಸದಸ್ಯರು ಬರುವವರೆಗೆ ಹಳಬರು ಮುಂದುವರಿಯುತ್ತಾರೆ ಎಂದು ಕೆಎಂಸಿಯ ಕಾಯಿದೆಯ ಐದನೇ ಕಂಡಿಕೆಯಲ್ಲಿ ನೀಡಿರುವ ತಾತ್ಕಾಲಿಕ ಅವಕಾಶವನ್ನೇ ದುರುಪಯೋಗಿಸಿಕೊಂಡು, ಹೊಸ ಸದಸ್ಯರೇ ಬಾರದಂತೆ ತಡೆದು ಹಳಬರೇ ಹದಿಮೂರು ವರ್ಷಗಳ ಕಾಲ ಮುಂದುವರಿಯಲು ಸಾಧ್ಯವಾದುದು ಸಾಂವಿಧಾನಿಕ ಸಂಸ್ಥೆಯಲ್ಲಿ ಕಾನೂನಿಗೆ ಆಗಿರುವ ಅಪಚಾರವಾಗಿದ್ದು, ಇನ್ನೆಂದಿಗೂ ಇಂಥವು ಪುನರಾವರ್ತನೆಯಾಗದಂತೆ ತಡೆಯಬೇಕು, ಅದಕ್ಕಾಗಿ ಕಾನೂನಿನಲ್ಲಿ ಸೂಕ್ತ ತಿದ್ದುಪಡಿಗಳನ್ನು ಮಾಡಲೇಬೇಕು.

ವೈದ್ಯಕೀಯ ಪರಿಷತ್ತಿಗೆ ಐವರು ಸದಸ್ಯರನ್ನು ರಾಜ್ಯ ಸರಕಾರವು ನಾಮನಿರ್ದೇಶನ ಮಾಡುವಾಗ ಚುನಾಯಿತ ಸದಸ್ಯರಲ್ಲಿ ಮಹಿಳೆಯರು ಹಾಗೂ ಇತರ ವರ್ಗಗಳವರು ಸ್ಥಾನವನ್ನು ಪಡೆದಿರದಿದ್ದಲ್ಲಿ ಆ ವರ್ಗಗಳವರಿಗೆ ಪ್ರಾತಿನಿಧ್ಯ ನೀಡುವುದನ್ನು ಪರಿಗಣಿಸಬೇಕು ಎಂದು ವೈದ್ಯಕೀಯ ನೋಂದಣಿ ಕಾಯಿದೆಯ ಕಂಡಿಕೆ 3(2)(ಡಿ)ಯಲ್ಲಿ ಸ್ಪಷ್ಟವಾಗಿ ಹೇಳಿದೆ. ಆದರೆ ಜನವರಿ 2020ರಲ್ಲಿ ನಡೆದ ಚುನಾವಣೆಗಳಿಗೆ ಮೂರು ದಿನ ಮೊದಲೇ ರಾಜ್ಯ ಸರಕಾರವು ಐವರು ಸದಸ್ಯರನ್ನು ನಾಮ ನಿರ್ದೇಶನ ಮಾಡಿತ್ತು, ಅವರೆಲ್ಲರೂ ಗಂಡಸರೇ ಆಗಿದ್ದು, ನಾಲ್ವರು ಮೇಲ್ಜಾತಿಗಳವರಾಗಿದ್ದರು. ಈ ನಾಮನಿರ್ದೇಶನಗಳನ್ನು ಮಾಡುವಾಗ ಮಹಿಳೆಯರು, ಅಲ್ಪಸಂಖ್ಯಾತರು ಹಾಗೂ ಪರಿಶಿಷ್ಟ ಜಾತಿ ಹಾಗೂ ವರ್ಗಗಳವರಿಗೆ ಪ್ರಾತಿನಿಧ್ಯ ನೀಡಬೇಕೆಂಬ ಕಾನೂನಿನ ಆಶಯವನ್ನು ಕಡೆಗಣಿಸಲಾಗಿದೆ ಎಂದು ಸಲ್ಲಿಸಿದ್ದ ಅರ್ಜಿಯನ್ನು ಮಾನ್ಯ ಮಾಡಿದ ಉಚ್ಚ ನ್ಯಾಯಾಲಯದ ಸೂಚನೆಯ ಮೇರೆಗೆ ಆ ಐದು ನಾಮಕರಣಗಳು ಅದೇ ವರ್ಷ ರದ್ದಾಗಿದ್ದವು. ಹೀಗೆ ರದ್ದಾದುದನ್ನು ಕೂಡ ಕಲ್ಬುರ್ಗಿ ಪೀಠದೆದುರು ಪ್ರಶ್ನಿಸಲಾಗಿತ್ತು, ಆದರೆ ನ್ಯಾಯಾಲಯವು ಆ ಅರ್ಜಿಯನ್ನು ವಜಾ ಮಾಡಿತ್ತು.

ಹೀಗೆ ರದ್ದಾದ ಐದು ಸ್ಥಾನಗಳ ನಾಮನಿರ್ದೇಶನವನ್ನು ಕೂಡಲೇ ಮಾಡಬೇಕು, ಮಹಿಳೆಯರು, ಅಲ್ಪಸಂಖ್ಯಾತರು ಹಾಗೂ ಪರಿಶಿಷ್ಟ ಜಾತಿ ಹಾಗೂ ವರ್ಗಗಳವರಿಗೆ ಪರಿಷತ್ತಿನಲ್ಲಿ ಪ್ರಾತಿನಿಧ್ಯ ನೀಡಬೇಕು ಎಂದು ನಿರಂತರವಾಗಿ ಸರಕಾರವನ್ನು ಒತ್ತಾಯಿಸಲಾಗಿತ್ತು. ನವೆಂಬರ್ 2023ರಲ್ಲಿ ಚುನಾವಣೆಗಳು ಊರ್ಜಿತಗೊಂಡ ಬಳಿಕವೂ ಸರಕಾರವು ಈ ನಾಮನಿರ್ದೇಶನಗಳನ್ನು ಮಾಡಲು ತಡಮಾಡಿದಾಗ ಮತ್ತೆ ಇದೇ ಮಾರ್ಚ್‌ನಲ್ಲಿ ಉಚ್ಚ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಲಾಗಿತ್ತು.

ಅಂತೂ ಜೂನ್ ಮೊದಲ ವಾರದಲ್ಲಿ ಸರಕಾರವು ನಾಲ್ವರು ವೈದ್ಯರನ್ನು ನಾಮಕರಣ ಮಾಡಿತು, ಓರ್ವ ಮಹಿಳಾ ವೈದ್ಯರಿಗಷ್ಟೇ ಅವಕಾಶ ದೊರೆತುದು ಬಿಟ್ಟರೆ ಅಲ್ಪ ಸಂಖ್ಯಾತ ಹಾಗೂ ಪರಿಶಿಷ್ಟ ಜಾತಿ ಹಾಗೂ ವರ್ಗಗಳವರನ್ನು ಮತ್ತೆ ಕಡೆಗಣಿಸಲಾಯಿತು. ಇಂದು ರಾಜಕೀಯವಾಗಿ ಉನ್ನತ ಅಧಿಕಾರವನ್ನು ಪಡೆದು ಪ್ರಬಲರಾಗಿರುವ ಸಮುದಾಯಗಳವರು ಎಲ್ಲಾ ಪ್ರಮುಖ ಅಧಿಕಾರಯುಕ್ತ ಸ್ಥಾನಗಳಲ್ಲಿ ತಮ್ಮ ಸಮುದಾಯಗಳವರನ್ನೇ ನಿಯು ಕ್ತಿಗೊಳಿಸುತ್ತಿರುವುದು, ಮತ್ತು ರಾಜಕೀಯ ಅಧಿಕಾರವನ್ನು ಪಡೆಯುವ ಅವಕಾಶಗಳಿಂದ ಮೊದಲೇ ವಂಚಿತರಾಗಿರುವ ಅಲ್ಪಸಂಖ್ಯಾತರು ಮತ್ತು ಪರಿಶಿಷ್ಟ ಜಾತಿ ಹಾಗೂ ವರ್ಗಗಳವರನ್ನು ಪ್ರಮುಖ ನೇಮಕಾತಿಗಳಿಂದ ಹೊರಗಿಡುತ್ತಿರುವುದು ಸಂವಿಧಾನದ ಹಾಗೂ ಕಾನೂನುಗಳ ಆಶಯಗಳಿಗೆ ಮಾಡುತ್ತಿರುವ ಅಪಚಾರವಾಗಿದೆ, ಅನ್ಯಾಯವಾಗಿದೆ. ಆದ್ದರಿಂದ ಕಾಯಿದೆಯ ಕಂಡಿಕೆ 3(2)(ಡಿ) ಯಲ್ಲಿ ಮಹಿಳೆಯರು ಮತ್ತು ಇತರ ವರ್ಗಗಳವರು ಎಂದಿರುವಲ್ಲಿ ಮಹಿಳೆಯರು, ಅಲ್ಪಸಂಖ್ಯಾತರು ಮತ್ತು ಪರಿಶಿಷ್ಟ ಜಾತಿ ಹಾಗೂ ವರ್ಗಗಳವರ ಪ್ರಾತಿನಿಧ್ಯ ಎಂದು ಸ್ಪಷ್ಟವಾದ ತಿದ್ದುಪಡಿಯನ್ನು ಮಾಡಬೇಕೆಂದು ನಾವು ಆಗ್ರಹಿಸುತ್ತೇವೆ. ಹಾಗೆಯೇ, ಇತರ ಎಲ್ಲಾ ನಿಗಮಗಳು, ಮಂಡಳಿಗಳು, ಅಕಾಡೆಮಿಗಳು, ವಿಶ್ವವಿದ್ಯಾನಿಲಯದ ಹುದ್ದೆಗಳು ಮುಂತಾದವುಗಳ ನೇಮಕಾತಿಗಳಲ್ಲೂ ಮಹಿಳೆಯರು, ಅಲ್ಪ ಸಂಖ್ಯಾತರು ಮತ್ತು ಪರಿಶಿಷ್ಟ ಜಾತಿ ಮತ್ತು ವರ್ಗಗಳವರಿಗೆ ಪ್ರಾತಿನಿಧ್ಯ ನೀಡಬೇಕೆಂದು ಸ್ಪಷ್ಟವಾದ ಕಾನೂನುಗಳನ್ನು ಮಾಡಬೇಕು ಮತ್ತು ಅವನ್ನು ತಪ್ಪದೇ ಪಾಲಿಸಬೇಕು ಎಂದು ಆಗ್ರಹಿಸುತ್ತೇವೆ.

ವೈದ್ಯಕೀಯ ಪರಿಷತ್ತು ವೃತ್ತಿ ಸಂಹಿತೆ ಉಲ್ಲಂಘನೆ ಹಾಗೂ ಚಿಕಿತ್ಸೆಗಳ ಲೋಪಗಳ ಬಗ್ಗೆ ವಿಚಾರಣೆ ನಡೆಸುವ ಸಂಸ್ಥೆಯಾಗಿರುವುದರಿಂದ ಅದರ ವಿಶ್ವಾಸಾರ್ಹತೆಯನ್ನು ಹೆಚ್ಚಿಸುವುದಕ್ಕಾಗಿ ಜನಸಾಮಾನ್ಯರ ಪ್ರತಿನಿಧಿಯಾಗಿ ನಿವೃತ್ತ ನ್ಯಾಯಾಧೀಶರು, ವಿಶ್ರಾಂತ ಕುಲಪತಿಗಳು ಅಥವಾ ತತ್ಸಮಾನರಾದವರನ್ನು, ಅವರಲ್ಲೂ ಮಹಿಳೆಯರನ್ನು, ಈ ವಿಚಾರಣೆಗಳಲ್ಲಿ ವೀಕ್ಷಕರಾಗುವಂತಹ ಅವಕಾಶವನ್ನು ಕೂಡ ಕಾಯಿದೆಯಲ್ಲಿ ಕಲ್ಪಿಸಬೇಕೆಂದು ನಾವು ಆಗ್ರಹಿಸುತ್ತೇವೆ.

ಡಾ. ಶ್ರೀನಿವಾಸ ಕಕ್ಕಿಲ್ಲಾಯ, ಮಂಗಳೂರು, ಡಾ. ಎಚ್ ಎಸ್ ಅನುಪಮಾ, ಕವಲಕ್ಕಿ, ಡಾ. ಪಿ.ವಿ. ಭಂಡಾರಿ, ಉಡುಪಿ, ಡಾ. ಸಂಜೀವ ಕುಲಕರ್ಣಿ, ಧಾರವಾಡ, ಡಾ. ಟಿ. ಶ್ರೀನಿವಾಸ ರೆಡ್ಡಿ, ಕಲ್ಬುರ್ಗಿ, ಡಾ. ಅರವಿಂದ ಪಟೇಲ್, ಬಳ್ಳಾರಿ, ಡಾ. ಜಿ. ರಾಮಕೃಷ್ಣ, ಬೆಂಗಳೂರು ಮೋಹನ ಕಾತರಕಿ, ಹಿರಿಯ ನ್ಯಾಯವಾದಿಗಳು, ದೆಹಲಿ, ಡಾ. ಮರುಳಸಿದ್ದಪ್ಪ, ಬೆಂಗಳೂರು, ಡಾ. ಎಸ್ ಜಿ ಸಿದ್ದರಾಮಯ್ಯ, ಬೆಂಗಳೂರು, ಪ್ರೊ. ಮಾವಳ್ಳಿ ಶಂಕರ್, ಬೆಂಗಳೂರು, ಡಾ. ಸಿದ್ದನಗೌಡ ಪಾಟೀಲ್, ಬೆಂಗಳೂರು, ಡಾ. ನಿರಂಜನಾರಾಧ್ಯ ವಿಪಿ, ಬೆಂಗಳೂರು, ಡಾ. ಮೂಡ್ನಾಕೂಡು, ಚಿನ್ನಸ್ವಾಮಿ, ಬೆಂಗಳೂರು, ಡಾ. ವಸುಂಧರಾ ಭೂಪತಿ, ಬೆಂಗಳೂರು, ಡಾ. ಎನ್. ಗಾಯತ್ರಿ, ಬೆಂಗಳೂರು, ಡಾ. ಇಂದಿರಾ ಹೆಗ್ಗಡೆ, ಮೈಸೂರು ಡಾ. ಬಿ. ಆರ್. ಮಂಜುನಾಥ, ಬೆಂಗಳೂರು, ಡಿ. ಉಮಾಪತಿ, ದೆಹಲಿ, ಬಸವಪ್ರಭು ಹೊಸಕೇರಿ, ಧಾರವಾಡ, ಅಲ್ಲಮಪ್ರಭು ಬೆಟ್ಟದೂರು, ಕೊಪ್ಪಳ ಬಿ ಸುರೇಶ, ಬೆಂಗಳೂರು, ವಿ. ಎಲ್. ನರಸಿಂಹಮೂರ್ತಿ, ಬೆಂಗಳೂರು, ಸನತಕುಮಾರ ಬೆಳಗಲಿ, ಧಾರವಾಡ, ಕೇಸರಿ ಹರವು, ಬೆಂಗಳೂರು ಬಸವರಾಜ ಸೂಳಿಭಾವಿ, ಗದಗ, ನಾಗೇಂದ್ರ ಬಡಗಲಪುರ, ಮೈಸೂರು, ಡಾ. ಸದಾಶಿವ ಮರ್ಜಿ, ಧಾರವಾಡ, ನಾ ದಿವಾಕರ, ಮೈಸೂರು, ಶರಣಪ್ಪ ಬಾಚಲಾಪುರ, ಕೊಪ್ಪಳ, ಡಿಎಂ ಬಡಿಗೇರ, ಕೊಪ್ಪಳ, ಮೆಹಬೂಬ ಮಠದ, ಕೊಪ್ಪಳ, ವಿ ಎನ್ ಲಕ್ಷೀನಾರಾಯಣ, ಮೈಸೂರು, ಶಂಕರಪುರ ಸುರೇಶ್, ನಂಜನಗೂಡು, ಕೆ. ಫಣಿರಾಜ, ಉಡುಪಿ, ಜಿ. ವಿ. ಆನಂದಮೂರ್ತಿ, ತುಮಕೂರು, ಸಂಜ್ಯೋತಿ ವಿ ಕೆ, ಬೆಂಗಳೂರು, ಮಂಸೋರೆ, ಬೆಂಗಳೂರು ಚಂದ್ರಕಾಂತ ವಡ್ಡು, ಬೆಂಗಳೂರು.

# ತಕ್ಷಣ ಡೆಂಗ್ಯು ನಿಯಂತ್ರಣಕ್ಕೆ ತನ್ನಿ: ಅಧಿಕಾರಿಗಳಿಗೆ ಸಿಎಂ ಸ್ಪಷ್ಟ ಸೂಚನೆ



ಬೆಂಗಳೂರು:-

ಜಿಲ್ಲಾಧಿಕಾರಿಗಳಿಗೆ ಮಹಾರಾಜರು ಎನ್ನುವ ಭಾವನೆ ಇದ್ದರೆ ಅಭಿವೃದ್ಧಿ ಮತ್ತು ಪ್ರಗತಿ ಸಾಧ್ಯವಿಲ್ಲ. ರಾಜಕಾರಣಿಗಳು ಮತ್ತು ಅಧಿಕಾರಿಗಳು ಇಬ್ಬರೂ ಜನ ಸೇವಕರು ಎನ್ನುವುದನ್ನು ನೆನಪಿನಲ್ಲಿಟ್ಟುಕೊಂಡು ಜನಸೇವೆ ಮಾಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದರು. ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ DC ಮತ್ತು CEO ಹಾಗೂ ಉಸ್ತುವಾರಿ ಕಾರ್ಯದರ್ಶಿಗಳ ಸಭೆಯಲ್ಲಿ ಈ ಸೂಚನೆ ನೀಡಿದರು. ಸರ್ಕಾರದ ಕಾರ್ಯಕ್ರಮಗಳು, ಯೋಜನೆಗಳು ಪರಿಣಾಮಕಾರಿಯಾಗಿ ಜನ ಸಾಮಾನ್ಯರಿಗೆ ತಲುಪಿಸಲು DC-SP-CEO ಗಳು ಕ್ರಿಯಾಶೀಲತೆಯಿಂದ, ಸಮನ್ವಯತೆಯಿಂದ ಕೆಲಸ ಮಾಡಬೇಕು. ಆಗ ಮಾತ್ರ ಸರ್ಕಾರದ ಕಾಳಜಿಗಳು ಜನರಿಗೆ ತಲುಪಲು ಸಾಧ್ಯ ಎಂದರು. ರಾಜ್ಯದಲ್ಲಿ ಡೆಂಗ್ಯು ನಿಯಂತ್ರಣ-ಕ್ಕೆ ಸಮರೋಪಾದಿಯಲ್ಲಿ ಕೆಲಸ ಮಾಡಿ. DC, DHO ಗಳು ತಾಲ್ಲೂಕು ಮಟ್ಟದ ಅಧಿಕಾರಿಗಳ ಜೊತೆ ಸಭೆ ಮಾಡಿ ಕ್ಷಿಪ್ರವಾಗಿ ಕೆಲಸ ಮಾಡಿ ಎಂದು ಸೂಚಿಸಿದರು. ಇಷ್ಟು ದಿನ ಉದಾಸೀನ, ನಿರ್ಲಕ್ಷ್ಯಕ್ಕೆ, ಕರ್ತವ್ಯಲೋಪಕ್ಕೆ ಕೆಳ ಹಂತದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ. ಇವತ್ತಿನಿಂದ ಹಿರಿಯ ಅಧಿಕಾರಿಗಳನ್ನೂ ಹೊಣೆ ಮಾಡಿ ಕ್ರಮ ಕೈಗೊಳ್ಳುತ್ತೇನೆ ಎಂದು ಸ್ಪಷ್ಟ ಎಚ್ಚರಿಕೆ ನೀಡಿದರು. DC-CEO ಗಳು, ತಮ್ಮ ಜಿಲ್ಲೆಯ ಸಮಗ್ರ ಮಾಹಿತಿಗಳನ್ನು ಅಂಗೈಯಲ್ಲಿ ಇಟ್ಟು-ಕೊಂಡು ಉತ್ಸಾಹದಿಂದ ಕೆಲಸ ಮಾಡಬೇಕು. ಆಗ ಮಾತ್ರ ಪ್ರಗತಿ ಮತ್ತು ಅಭಿವೃದ್ಧಿಯ ವೇಗ ಕಾಣಲು ಸಾಧ್ಯ. ರಾಜಕಾರಣಿಗಳು, ಅಧಿಕಾರಿಗಳ ಅನುಭವದ ಮೇಲೆ ಆಡಳಿತ ಹೆಚ್ಚು ಪರಿಣಾಮಕಾರಿಯಾಗಿ ಆಗಬೇಕಿತ್ತು. 40 ವರ್ಷಗಳ ಹಿಂದೆ ಅಧಿಕಾರಿಗಳು ಕೆಲಸ ನಿರ್ವಹಿಸುವ ರೀತಿಗೂ, ಇವತ್ತಿನ ಅಧಿಕಾರಿಗಳು ಕರ್ತವ್ಯ ನಿರ್ವಹಿಸುವ ರೀತಿಗೂ ಹೋಲಿಸಿದರೆ ಕಾರ್ಯಾಂಗ ಮತ್ತು ಶಾಸಕಾಂಗ ಈಗ ಹೆಚ್ಚು ಪರಿಣಾಮಕಾರಿಯಾಗಿ, ಗುಣಾತ್ಮಕವಾಗಿ ಕೆಲಸ ಮಾಡುತ್ತಿಲ್ಲ ಎನ್ನುವುದು ಗೊತ್ತಾಗುತ್ತಿದೆ. ಇದು ಬಹಳ ಬೇಸರದ ಸಂಗತಿ ಅಭಿವೃದ್ಧಿ ಮತ್ತು ಕಾನೂನು ಸುವ್ಯವಸ್ಥೆ ಪರಸ್ಪರ ಪೂರಕ. ಒಂದು ಇಲ್ಲದಿದ್ದರೆ ಮತ್ತೊಂದು ಇರಲು ಸಾಧ್ಯವಿಲ್ಲ. ಕರ್ನಾಟಕ ಗುಡ್ ಗೌರ್ನೆನ್ಸ್ ನಲ್ಲಿ ಮಾದರಿ ರಾಜ್ಯವಾಗಿದೆ ಎನ್ನುವುದನ್ನು ಮರೆಯಬಾರದು. ಈ ಹೆಗ್ಗಳಿಕೆಯನ್ನು ಮುಂದುವರೆಸಿಕೊಂಡು ಹೋಗುವ ಜವಾಬ್ದಾರಿ ನಿಮ್ಮಗಳ ಮೇಲಿದೆ. ಜಿಲ್ಲಾಧಿಕಾರಿಗಳು ಯಾವುದೇ ಜಿಲ್ಲೆಗೆ ಹೋಗುವ ಮೊದಲು ಆಯಾ ಜಿಲ್ಲೆಗಳ ಮಾನವ ಅಭಿವೃದ್ಧಿ ಸೂಚ್ಯಂಕಗಳ ಜೊತೆಗೆ ಜಿಲ್ಲೆಯ ಸಮಗ್ರ ಮಾಹಿತಿ ತಿಳಿದುಕೊಳ್ಳಬೇಕು. SSLC ಫಲಿತಾಂಶದಲ್ಲಿ ಕೆಲವು ಜಿಲ್ಲೆಗಳಲ್ಲಿ ಕುಸಿತ ಕಂಡಿರುವುದನ್ನು ಪ್ರಸ್ತಾಪಿಸಿದ ಮುಖ್ಯಮಂತ್ರಿಗಳು, ಈ ಬಾರಿ ಕಾಪಿಯನ್ನು ಸಂಪೂರ್ಣ ನಿಲ್ಲಿಸಿದ್ದು ಶ್ಲಾಘನೀಯ. ಆದರೆ ಈ ಕಾರಣಕ್ಕೆ ಫಲಿತಾಂಶ ಕುಸಿತ ಆಯಿತು ಎನ್ನುವ ಸಮರ್ಥನೆ ಸರಿಯಲ್ಲ. DC, CEO, ಇಲಾಖಾ ಕಾರ್ಯದರ್ಶಿಗಳ ಜವಾಬ್ದಾರಿ ಇಲ್ಲವಾ ? ಆತ್ಮಾವಲೋಕನ ಮಾಡಿಕೊಂಡು ಪರಿಸ್ಥಿತಿ ಸುಧಾರಿಸಲು ಪ್ರಯತ್ನಿಸಲೇಬೇಕು. DDPI, DC, CEO ಗಳು ಒಟ್ಟಿಗೇ ಕುಳಿತು ಚರ್ಚಿಸಿ ಪರಿಸ್ಥಿತಿ ಸುಧಾರಿಸಬೇಕು ಎನ್ನುವ ಸೂಚನೆ ನೀಡಿದರು. ಜನಸಂಪರ್ಕ, ಜನಸ್ಪಂದನ ಸಭೆಗಳಲ್ಲಿ 15-20 ಸಾವಿರ ಅರ್ಜಿಗಳು ಬರುತ್ತವೆ. ನೀವು ಸರಿಯಾಗಿ ಸ್ಥಳೀಯವಾಗಿ ಕೆಲಸ ಮಾಡಿದ್ದರೆ ಇಷ್ಟೊಂದು ಮಂದಿ ನನ್ನ ಬಳಿಗೆ ಏಕೆ ಬರುತ್ತಾರೆ ಎಂದು ಪ್ರಶ್ನಿಸಿ, DC, CEO ಗಳು ಇರೋದು ಜನಸಂಪರ್ಕ ಸಭೆಗಳಿಗೆ ಬಂದ ಅರ್ಜಿಗಳನ್ನು Forward ಮಾಡಿ ಮುಚ್ಚಳಿಕೆ ಕೊಟ್ಟು ಕೈತೊಳೆದುಕೊಳ್ಳೋಕಾ ಇರೋದು ? ಪರಿಹಾರ ಕೊಡಿಸುವವರು ಯಾರು? ಇದಕ್ಕೇನಾ ನೀವು ಇರೋದು ಎಂದು ಖಾರವಾಗಿ ಪ್ರಶ್ನಿಸಿದರು. ನೀವು ಪರಿಹಾರ ಕೊಡಲಿಲ್ಲ ಅಂತ ನನ್ನ ತನಕ ಬಂದಿದ್ದಾರೆ. ಜನರ ಸಮಸ್ಯೆಗಳ ಅರ್ಜಿಗಳು ಸಕಾರಾತ್ಮಕವಾಗಿ ವಿಲೇವಾರಿ ಆಗಿಲ್ಲ, ಗುಣಾತ್ಮಕವಾಗಿ ವಿಲೇವಾರಿ ಆಗಿಲ್ಲ ಅಂದರೆ ನಿಮ್ಮ ವಿರುದ್ಧ ಕ್ರಮ ಖಚಿತ ಎಂದು ಎಚ್ಚರಿಸಿದರು.

